ಸಂಪುಟ: 11 ಸಂಚಿಕೆ: 196 ಪುಟ: 4+2 ಬೆಲೆ : 3.00 ಬುಧವಾರ, ಸೆಪ್ಟೆಂಬರ್ 09, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 196 Pages : 4+2 Rate : 3.00 Wednesday, September 09, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22


ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಗದಗ ಜಿಲ್ಲೆಯಲ್ಲಿ ಡಿಜೆ ಸೌಂಡ್‌ಗೆ ಬ್ರೇಕ್!

### ಡಿಜೆ, ಬಾಸ್ ಬೂಸ್ಟರ್ ಸೇರಿ 75 ಡೆಸಿಬೆಲ್‌ಗಿಂತ ಹೆಚ್ಚಿನ ಶಬ್ದ ಸಾಧನಗಳ ಬಳಕೆ ನಿಷೇಧ

**ವಿಜಯಸಾಕ್ಷಿ ಸುದ್ದಿ, ಗದಗ**

ಸಾರ್ವಜನಿಕ ಸುವ್ಯವಸ್ಥೆ, ಶಾಂತಿ ಹಾಗೂ ಜನಸಾಮಾನ್ಯರ ನೆಮ್ಮದಿಯ ಹಿತದೃಷ್ಟಿಯಿಂದ



ಜಿಲ್ಲೆಯಾದ್ಯಂತ ಡಿಜೆ ವ್ಯವಸ್ಥೆ, ಬಾಸ್ ಬೂಸ್ಟರ್, ಮೊಬೈಲ್ ಡಿಜೆ ವಾಹನಗಳು ಹಾಗೂ 75 ಡೆಸಿಬೆಲ್‌ಗಿಂತ ಹೆಚ್ಚಿನ ಶಬ್ದ ಉಂಟುಮಾಡುವ ಶಬ್ದವರ್ಧಕ ಸಾಧನಗಳ ಬಳಕೆಯನ್ನು ಮುಂದಿನ ಆದೇಶದವರೆಗೆ ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಆದೇಶ ಹೊರಡಿಸಿದ್ದಾರೆ.

ಶಬ್ದ ಮಾಲಿನ್ಯ (ನಿಯಂತ್ರಣ ಮತ್ತು ನಿಯಮಗಳು) ನಿಯಮಗಳು, 2000 ಹಾಗೂ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ (BNSS), 2023ರ ಕಲಂ 163ರಡಿ ಜಿಲ್ಲಾಧಿಕಾರಿಗಳಿಗೆ ಪ್ರದತ್ತವಾಗಿರುವ ಅಧಿಕಾರ ಬಳಸಿ ಈ ಆದೇಶ ಜಾರಿಗೊಳಿಸಲಾಗಿದೆ.

ವಸತಿ ಪ್ರದೇಶಗಳು ಹಾಗೂ ಆಸ್ಪತ್ರೆ, ಶಾಲೆ, ನ್ಯಾಯಾಲಯ ಮತ್ತು ಧಾರ್ಮಿಕ ಸ್ಥಳಗಳ 100 ಮೀಟರ್ ವ್ಯಾಪ್ತಿಯ ಸೈಲೆಂಟ್ ಝೋನ್‌ಗಳಲ್ಲಿ ಹೆಚ್ಚಿನ ಶಬ್ದ ಸಾಧನಗಳ ಬಳಕೆಯನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಲಾಗಿದೆ. ಇಳಿಜಾರು ರಸ್ತೆಗಳು, ಸಂಚಾರ ದಟ್ಟಣೆ ಪ್ರದೇಶಗಳು ಹಾಗೂ ಇತರ ಸೂಕ್ಷ್ಮ ಪ್ರದೇಶಗಳಲ್ಲೂ ಶಬ್ದ ನಿಯಂತ್ರಣ ಕಡ್ಡಾಯವಾಗಿದೆ.

ಅಲ್ಲದೆ, ಜಿಲ್ಲೆಯಾದ್ಯಂತ ರಾತ್ರಿ 10ರಿಂದ ಬೆಳಗ್ಗೆ 6ರವರೆಗೆ ಡಿಜೆ ಹಾಗೂ ಹೆಚ್ಚಿನ ಶಬ್ದ ಉಂಟುಮಾಡುವ ಸಾಧನಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಆದೇಶ ಉಲ್ಲಂಘನೆ ಕಂಡುಬಂದರೆ ಸಂಬಂಧಿಸಿದ ಪೊಲೀಸ್ ಅಧಿಕಾರಿಗಳು ಕಾರ್ಯಕ್ರಮ ಅಥವಾ ಮೆರವಣಿಗೆಯನ್ನು ತಕ್ಷಣ ಸ್ಥಗಿತಗೊಳಿಸಬಹುದು. ಡಿಜೆ ಹಾಗೂ ಶಬ್ದವರ್ಧಕ ಉಪಕರಣಗಳನ್ನು ಜಪ್ತಿ ಮಾಡುವುದು, ಅಗತ್ಯವಿದ್ದಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸುವುದು ಹಾಗೂ ಗುಂಪನ್ನು ಚದುರಿಸುವ ಕ್ರಮ ಕೈಗೊಳ್ಳಬಹುದು.

ನಿಯಮ ಉಲ್ಲಂಘಿಸಿದವರ ವಿರುದ್ಧ ಪ್ರಕರಣ ದಾಖಲಿಸುವುದರ ಜೊತೆಗೆ ನೀಡಿರುವ ಅನುಮತಿಗಳನ್ನು ರದ್ದುಪಡಿಸುವ ಅಧಿಕಾರವೂ ಸಂಬಂಧಿಸಿದ ಅಧಿಕಾರಿಗಳಿಗೆ ನೀಡಲಾಗಿದೆ.


ಸಾರ್ವಜನಿಕ ಕಾರ್ಯಕ್ರಮ, ಮೆರವಣಿಗೆ ಅಥವಾ ಆಚರಣೆಯಲ್ಲಿ ಹೆಚ್ಚಿನ ಶಬ್ದ ವ್ಯವಸ್ಥೆ ಬಳಸಬೇಕಾದರೆ ಪೂರ್ವ ಲಿಖಿತ ಅನುಮತಿ ಪಡೆಯಬೇಕು. ನಿಗದಿತ ಶಬ್ದಮಿತಿಯೊಳಗಿನ ಸಾಧನಗಳನ್ನಷ್ಟೇ ಬಳಸಬೇಕು. ಶಬ್ದ ಮಾಲಿನ್ಯ ನಿಯಮಗಳನ್ನು ಪಾಲಿಸುವ ಕುರಿತು ಆಯೋಜಕರು ಲಿಖಿತ ಮುಚ್ಚಳಿಕೆ ನೀಡಬೇಕು.

> ಆದೇಶ ಉಲ್ಲಂಘನೆಯಾದಲ್ಲಿ ಕಾರ್ಯಕ್ರಮದ ಆಯೋಜಕರೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ. ಸಾರ್ವಜನಿಕ ಶಾಂತಿ, ಸುವ್ಯವಸ್ಥೆ ಹಾಗೂ ಜನರ ನೆಮ್ಮದಿಗೆ ಧಕ್ಕೆ ಉಂಟಾಗದಂತೆ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
> -ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ

## ಗಜಾನನೋತ್ಸವಕ್ಕೆ ಡಿಜೆ ಸಂಪೂರ್ಣ ನಿಷೇಧ: ಎಸ್‌ಪಿ ಮಿಥುನ್

**ವಿಜಯಸಾಕ್ಷಿ ಸುದ್ದಿ, ಗದಗ**

ಈ ಬಾರಿ ಗಜಾನನೋತ್ಸವದ ಮೆರವಣಿಗೆಯಲ್ಲಿ ಡಿಜೆ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಸಣ್ಣ ಪ್ರಮಾಣದ ಸ್ಪೀಕರ್ ಬಳಸಲು



ಅವಕಾಶವಿದ್ದು, ದೊಡ್ಡ ಗಾತ್ರದ ಡಿಜೆಗಳಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಮಿಥುನ್ ಎಚ್.ಎನ್. ಸ್ಪಷ್ಟಪಡಿಸಿದರು.

ಗಜಾನನೋತ್ಸವದ ಹಿನ್ನೆಲೆಯಲ್ಲಿ ನಗರದ ಜಿಲ್ಲಾಧಿಕಾರಿ ಕಚೇರಿಯ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ನಡೆದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಭೆಯಲ್ಲಿ 180ಕ್ಕೂ ಹೆಚ್ಚು ಗಜಾನನ ಮಂಡಳಿಗಳ ಪದಾಧಿಕಾರಿಗಳು, ಹಿಂದೂ-ಮುಸ್ಲಿಂ ಮುಖಂಡರು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು.

ಡಿಜೆ ಬಳಕೆ ನಿಷೇಧದ ವಿಚಾರಕ್ಕೆ ಕೆಲವು ಹಿಂದೂ ಮುಖಂಡರು ಆಕ್ಷೇಪ ವ್ಯಕ್ತಪಡಿಸಿದರು. ಡಿಜೆ ನಿಷೇಧಿಸುವುದಾದರೆ ದೇಶಾದ್ಯಂತ ಎಲ್ಲ ಧಾರ್ಮಿಕ ಕಾರ್ಯಕ್ರಮಗಳಲ್ಲೂ ಏಕರೂಪವಾಗಿ ನಿಷೇಧ ಜಾರಿಗೊಳಿಸಬೇಕು ಎಂದು ಮುಖಂಡರು ಒತ್ತಾಯಿಸಿದರು.

## ಸೆ.19-20ರಂದು ವಿಶೇಷ ಜಾಗೃತಿ ಅಭಿಯಾನ: ಮುಕುಲ್ ಜೈನ

# 18 ವರ್ಷ ತುಂಬಿದ ಯುವಕರೇ, ಮತದಾರರ ಪಟ್ಟಿಗೆ ಬನ್ನಿ

**ವಿಜಯಸಾಕ್ಷಿ ಸುದ್ದಿ, ಗದಗ**



18 ವರ್ಷ ಪೂರ್ಣಗೊಂಡಿರುವ ಹಾಗೂ ಶೀಘ್ರದಲ್ಲೇ 18 ವರ್ಷ ಪೂರೈಸಲಿರುವ ಎಲ್ಲ ಅರ್ಹ ಯುವಕರನ್ನು ಗುರುತಿಸಿ ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ಆದ್ಯತೆ ನೀಡಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (SIR)-2026 ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕರಡು ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಗೆ ಮಾಹಿತಿ ನೀಡುವುದು ಹಾಗೂ ಅರ್ಹ ನಾಗರಿಕರು ತಮ್ಮ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಪ್ರೇರೇಪಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸೆ.19 ಹಾಗೂ 20ರಂದು 'ಯಾವುದೇ ಅರ್ಹ ಮತದಾರ ಮತದಾನದಿಂದ ಹೊರಗುಳಿಯಬಾರದು' ಎಂಬ ಧ್ಯೇಯವಾಕ್ಯದೊಂದಿಗೆ ವಿಶೇಷ ಮತದಾರರ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುವುದು.

ಈ ವೇಳೆ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗದ ಅರ್ಹ ನಾಗರಿಕರನ್ನು ಗುರುತಿಸಿ, ನೋಂದಣಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಪದವಿ, ಐಟಿಐ, ಪಾಲಿಟೆಕ್ನಿಕ್ ಹಾಗೂ ವಿಶ್ವವಿದ್ಯಾಲಯಗಳ ಪ್ರವೇಶ ನೋಂದಣಿ ಆಧರಿಸಿ 18 ವರ್ಷ ಪೂರ್ಣಗೊಂಡ ಹಾಗೂ ಶೀಘ್ರದಲ್ಲೇ 18 ವರ್ಷ ಪೂರೈಸಲಿರುವ ವಿದ್ಯಾರ್ಥಿಗಳ ಮಾಹಿತಿ ಸಂಗ್ರಹಿಸಬೇಕು. ಹೆಸರು, ವಯಸ್ಸು, ಜನ್ಮ ದಿನಾಂಕ ಹಾಗೂ ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಅರ್ಹರನ್ನು ಗುರುತಿಸುವಂತೆ ಸೂಚಿಸಿದರು.

ಕಾಲೇಜುಗಳಲ್ಲಿನ ಮತದಾರರ ಸಾಕ್ಷರತಾ ಕ್ಲಬ್‌ಗಳ (ಇಎಲ್‌ಸಿ) ಸದಸ್ಯರು ಹಾಗೂ ನೋಡಲ್ ಅಧಿಕಾರಿಗಳು ನೋಂದಣಿ ಪ್ರಕ್ರಿಯೆ, ಅಗತ್ಯ ದಾಖಲೆಗಳು, ಅರ್ಹತೆ ಮತ್ತು ಮತದಾನದ ಹಕ್ಕಿನ ಕುರಿತು ವಿದ್ಯಾರ್ಥಿಗಳಿಗೆ ನಿರಂತರ ಜಾಗೃತಿ ಮೂಡಿಸಬೇಕು. ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಪಡೆದು ಚುನಾವಣಾಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ನೋಂದಣಿ ಪ್ರಕ್ರಿಯೆ ತ್ವರಿತಗೊಳಿಸಬೇಕು ಎಂದರು.

ಎನ್‌ಎಸ್‌ಎಸ್, ಎನ್‌ಸಿಸಿ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಯುವಕರ ಸಹಯೋಗದಲ್ಲಿ ಸೈಕಲ್, ಬೈಕ್ ರ‍್ಯಾಲಿ ಸೇರಿದಂತೆ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಸೂಚಿಸಿದರು. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್‌ನ ಡಿಜಿಟಲ್ ಹಾಗೂ ಭೌತಿಕ ಹೋರ್ಡಿಂಗ್‌ಗಳ ಮೂಲಕವೂ ಮತದಾರರ ನೋಂದಣಿ ಮತ್ತು ಮತದಾನದ ಮಹತ್ವದ ಸಂದೇಶ ತಲುಪಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

> ಅರ್ಹ ಪ್ರತಿಯೊಬ್ಬ ಯುವ ಮತದಾರನ ಹೆಸರನ್ನೂ ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸುವುದು ಅಭಿಯಾನದ ಪ್ರಮುಖ ಉದ್ದೇಶ. ಯುವಜನರು ಪ್ರಜಾಪ್ರಭುತ್ವದ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸಬೇಕು.
> -ಮುಕುಲ್ ಜೈನ್, ಜಿಪಂ ಸಿಇಒ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ

## ರಾಹುಲ್ ಗಾಂಧಿ ಬೆಂಬಲಿಸಿ ಗದಗದಲ್ಲಿ ಬೃಹತ್ ಪ್ರತಿಭಟನಾ ಜಾಥಾ

# ಎಫ್‌ಐಆರ್ ವಿರುದ್ಧ ಕಾಂಗ್ರೆಸ್ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ಗದಗ**



ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ಮಾಡಿದ್ದ ಸ್ಥಳವನ್ನು ಶುದ್ಧೀಕರಣ ಮಾಡಿರುವುದನ್ನು ಖಂಡಿಸಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಮಂಗಳವಾರ ನಗರದಲ್ಲಿ ಬೃಹತ್ ಪ್ರತಿಭಟನಾ ಜಾಥಾ ನಡೆಯಿತು.

ಉತ್ತರಾಖಂಡದ ಹಲ್ದ್ವಾನಿಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ಮಾಡಿದ್ದ ಸ್ಥಳವನ್ನು ಶುದ್ಧೀಕರಣ ಮಾಡಿರುವುದನ್ನು ರಾಹುಲ್ ಗಾಂಧಿ ಖಂಡಿಸಿದ್ದರು. ಇದನ್ನು ಆಧರಿಸಿ ಅವರ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ರಾಜಕೀಯ ದ್ವೇಷದ ಕ್ರಮ ಎಂದು ಆರೋಪಿಸಿದ ಕಾಂಗ್ರೆಸ್ ಮುಖಂಡರು, ಎಫ್‌ಐಆರ್ ಅನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ನಗರದ ಟಿಪ್ಪು ಸುಲ್ತಾನ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ 500ಕ್ಕೂ ಹೆಚ್ಚು ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಪಾದಯಾತ್ರೆ ನಡೆಸಿದರು. ಬಳಿಕ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ ಕೇಂದ್ರ ಸರ್ಕಾರ ಹಾಗೂ ಆರ್‌ಎಸ್‌ಎಸ್ ವಿರುದ್ಧ ಘೋಷಣೆಗಳನ್ನು ಕೂಗಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

**ಬೆದರಿಕೆಗಳಿಗೆ ಕಾಂಗ್ರೆಸ್ ಜಗ್ಗದು:** ಪ್ರತಿಭಟನೆಯನ್ನು ಉದ್ದೇಶಿಸಿ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ಪರವಾಗಿ ಧ್ವನಿ ಎತ್ತುವ ನಾಯಕರನ್ನು ಬೆದರಿಸುವ ಪ್ರಯತ್ನ ನಡೆಯುತ್ತಿದೆ. ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ರಾಜಕೀಯ ದ್ವೇಷದ ಕ್ರಮವಾಗಿದೆ. ಸತ್ಯ ಮತ್ತು ಸಂವಿಧಾನದ ಪರವಾಗಿ ಕಾಂಗ್ರೆಸ್ ಹೋರಾಟ ಮುಂದುವರಿಸಲಿದೆ ಎಂದರು.

> ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ಪರವಾಗಿ ಧ್ವನಿ ಎತ್ತುವ ನಾಯಕರನ್ನು ಬೆದರಿಸುವ ಪ್ರಯತ್ನ ನಡೆಯುತ್ತಿದೆ. ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ರಾಜಕೀಯ ದ್ವೇಷದ ಕ್ರಮ. ಸತ್ಯ ಮತ್ತು ಸಂವಿಧಾನದ ಪರವಾಗಿ ಕಾಂಗ್ರೆಸ್ ಹೋರಾಟ ಮುಂದುವರಿಸಲಿದೆ.
> - ಕೃಷ್ಣಗೌಡ ಪಾಟೀಲ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ

ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ಮಾಡಿದ ಸ್ಥಳವನ್ನು ಶುದ್ಧೀಕರಣ ಮಾಡಿರುವುದು ಅತ್ಯಂತ ಖಂಡನೀಯ.

ಇಂತಹ ಘಟನೆಗಳು ದೇಶದ ಪ್ರಜಾಪ್ರಭುತ್ವ ಹಾಗೂ ಸಾಮಾಜಿಕ ಸಾಮರಸ್ಯಕ್ಕೆ ಧಕ್ಕೆ ತರುವ ಮನಸ್ಥಿತಿಯನ್ನು ತೋರಿಸುತ್ತವೆ. ಇಂತಹ ಕೃತ್ಯಗಳಿಂದ ಕಾಂಗ್ರೆಸ್‌ನ ಧ್ವನಿಯನ್ನು ಹತ್ತಿಕ್ಕಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಯುವ ಮುಖಂಡ ಅಕ್ಷಯ ಪಾಟೀಲ, ಜಿಪಂ ಮಾಜಿ ಅಧ್ಯಕ್ಷ ವಾಸಪ್ಪ ಕುರುಡಗಿ, ಬಸವರಾಜ ಕಡೇಮನಿ ಸೇರಿದಂತೆ ಹಲವು ಮುಖಂಡರು ಮಾತನಾಡಿ, ಕೇಂದ್ರ ಸರ್ಕಾರದ ನೀತಿಗಳು ಹಾಗೂ ಆರ್‌ಎಸ್‌ಎಸ್‌ನ ಕಾರ್ಯವೈಖರಿಯನ್ನು ಟೀಕಿಸಿದರು. ದೇಶದ ಸಂವಿಧಾನ, ಪ್ರಜಾಪ್ರಭುತ್ವ ಮತ್ತು ಜಾತ್ಯತೀತ ಆಶಯಗಳನ್ನು ರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ವಿರೋಧ ಪಕ್ಷಗಳ ಧ್ವನಿಯನ್ನು ಹತ್ತಿಕ್ಕುವ ಯಾವುದೇ ಪ್ರಯತ್ನವನ್ನು ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ದಲಿತರು, ಅಲ್ಪಸಂಖ್ಯಾತರು ಹಾಗೂ ವಿರೋಧ ಪಕ್ಷಗಳ ವಿಚಾರದಲ್ಲಿ ಕೇಂದ್ರ ಸರ್ಕಾರದ ಧೋರಣೆಯನ್ನು ಟೀಕಿಸಿದ ಪ್ರತಿಭಟನಾಕಾರರು, ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ಸುಜಾತ ದೊಡ್ಡಮನಿ, ಅಶೋಕ ಮಂದಾಲಿ, ಪ್ರಭು ಬುರಬುರೆ, ನೀಲಮ್ಮ ಬೋಳನವರ, ಉಮರ್ ಫಾರೂಕ್ ಹುಬ್ಬಳ್ಳಿ, ಮಹ್ಮದ ಶಾಲಗಾರ, ಬಸವರಾಜ ಸುಂಕಾಪೂರ ಸೇರಿದಂತೆ ಅನೇಕ ಹಿರಿಯ ಕಾಂಗ್ರೆಸ್ ಮುಖಂಡರು, ಯುವ ಕಾಂಗ್ರೆಸ್ ಪದಾಧಿಕಾರಿಗಳು, ವಿವಿಧ ಘಟಕಗಳ ಕಾರ್ಯಕರ್ತರು ಹಾಗೂ ಪಕ್ಷದ ಕಾರ್ಯಕರ್ತರು ಪಾಲ್ಗೊಂಡಿದ್ದರು.

## ಗಣೇಶೋತ್ಸವಕ್ಕೆ ಪಿಒಪಿ, ಡಿಜೆ ನಿಷೇಧ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮುಂಬರುವ ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಪಿಒಪಿ ಗಣಪತಿ ವಿಗ್ರಹ ಹಾಗೂ ಡಿಜೆ ಬಳಕೆಯನ್ನು ನಿಷೇಧಿಸಲಾಗಿದ್ದು, ಸಾರ್ವಜನಿಕರು ಪರಿಸರಸ್ನೇಹಿ ಗಣಪತಿ ಪ್ರತಿಷ್ಠಾಪಿಸಿ ಹಬ್ಬವನ್ನು ಆಚರಿಸಬೇಕು. ನಿಯಮ ಉಲ್ಲಂಘಿಸಿದರೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಹಸೀಲ್ದಾರ್ ಕೆ. ರಾಘವೇಂದ್ರ ರಾವ್ ಎಚ್ಚರಿಸಿದರು. ಮಂಗಳವಾರ ತಹಸೀಲ್ದಾರ್ ಕಚೇರಿಯಲ್ಲಿ ನಡೆದ ತಾಲೂಕು ಮಟ್ಟದ ಕಾರ್ಯಪಡೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕವಾಗಿ ಗಣಪತಿ ಪ್ರತಿಷ್ಠಾಪಿಸುವ ಮಂಡಳಿಗಳು ಸ್ಥಳೀಯ ಸಂಸ್ಥೆಯಿಂದ ನಿರಾಪೇಕ್ಷಣಾ ಪತ್ರ (ಎನ್‌ಒಸಿ) ಪಡೆದು, ಪೊಲೀಸ್, ಹೆಸ್ಕಾಂ ಹಾಗೂ ಅಗ್ನಿಶಾಮಕ ಇಲಾಖೆಯಿಂದ ಅಗತ್ಯ ಪರವಾನಗಿ ಪಡೆಯುವುದು ಕಡ್ಡಾಯ. ಏಕಗವಾಕ್ಷಿ ವ್ಯವಸ್ಥೆಯಡಿ ಪರಿಶೀಲನೆ ನಡೆಸಿ ಪರವಾನಗಿ ನೀಡಲಾಗುವುದು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಎಲ್ಲ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದರು.

ಅನುಮತಿ ಪಡೆದ ಪಟಾಕಿ ವ್ಯಾಪಾರಿಗಳು ಮಾತ್ರ ಪಟ್ಟಣದ ಹೊರವಲಯದಲ್ಲಿ ನಿಗದಿಪಡಿಸಿದ ಸ್ಥಳದಲ್ಲಿ ಪಟಾಕಿ ಮಾರಾಟ ಮಾಡಬೇಕು. ಅನಧಿಕೃತವಾಗಿ ಮಾರಾಟ ಮಾಡಿದರೆ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು. ಪಿಎಸ್‌ಐ ಈರಪ್ಪ ರಿತ್ತಿ ಮಾತನಾಡಿ, ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ವಿಗ್ರಹ ಪ್ರತಿಷ್ಠಾಪಿಸುವ ಸಂಘಟಕರು ಏಕಗವಾಕ್ಷಿ ವ್ಯವಸ್ಥೆಯಡಿ ಅರ್ಜಿ ಸಲ್ಲಿಸಿ ಅನುಮತಿ ಪಡೆಯಬೇಕು. ಜಿಲ್ಲಾಧಿಕಾರಿಗಳ ಆದೇಶದಂತೆ ಡಿಜೆ ಹಾಗೂ ಹೆಚ್ಚಿನ ಡೆಸಿಬೆಲ್ ಶಬ್ದ ಉಂಟುಮಾಡುವ ಸಾಧನಗಳ ಬಳಕೆಯನ್ನು ನಿಷೇಧಿಸಲಾಗಿದ್ದು, ಎಲ್ಲರೂ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಸಹಕರಿಸಬೇಕು. ನಿಯಮ ಉಲ್ಲಂಘಿಸಿದರೆ ಪ್ರಕರಣ ದಾಖಲಿಸಲಾಗುವುದು ಎಂದು ಎಚ್ಚರಿಸಿದರು. ಸಭೆಯಲ್ಲಿ ಕಂದಾಯ ಇಲಾಖೆ ಸಿಬ್ಬಂದಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## 'ಶರ್ಮಿಷ್ಠೆ' ನಾಟಕ ಪ್ರದರ್ಶನ ಇಂದು

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ರಂಗಕಲಾವಿದೆ ಡಾ. ಉಮಾಶ್ರೀ ಅಭಿನಯದ 'ಶರ್ಮಿಷ್ಠೆ' ನಾಟಕ ಪ್ರದರ್ಶನವನ್ನು ಸೆ.9ರಂದು ಬುಧವಾರ ಸಂಜೆ 6 ಗಂಟೆಗೆ ನಗರದ ಭಾರತರತ್ನ ಪಂ. ಭೀಮಸೇನ್ ಜೋಶಿ ಜಿಲ್ಲಾರಂಗಮಂದಿರದಲ್ಲಿ ಆಯೋಜಿಸಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ನಾಟಕ ಪ್ರದರ್ಶನವನ್ನು ವೀಕ್ಷಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ವಿ. ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಂದು ವಾರದೊಳಗೆ ಫಲಕ ಅಳವಡಿಸಲು ಎಸ್.ಆರ್. ಪಾಟೀಲ ಸೂಚನೆ

# ನ್ಯಾಯಬೆಲೆ ಅಂಗಡಿಗಳಲ್ಲಿ ಮಾಹಿತಿ ಫಲಕ ಕಡ್ಡಾಯ

**ವಿಜಯಸಾಕ್ಷಿ ಸುದ್ದಿ, ಧಾರವಾಡ**



ಜಿಲ್ಲೆಯ ಎಲ್ಲ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರದ ದರ, ವಿತರಿಸಲಾಗುವ ಸಾಮಗ್ರಿಗಳು ಹಾಗೂ ಸರ್ಕಾರದ ಯೋಜನೆಗಳಿಗೆ ಸಂಬಂಧಿಸಿದ ಅಗತ್ಯ ಮಾಹಿತಿಯುಳ್ಳ ಫಲಕಗಳನ್ನು ಕಡ್ಡಾಯವಾಗಿ ಅಳವಡಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್. ಆರ್. ಪಾಟೀಲ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಗ್ಯಾರಂಟಿ ಯೋಜನೆಗಳ ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅನ್ನಭಾಗ್ಯ ಯೋಜನೆಯಡಿ ಪಡಿತರ ವಿತರಿಸುವ ಅಂಗಡಿಗಳಲ್ಲಿ ಮುಖ್ಯಮಂತ್ರಿ ಅವರ ಭಾವಚಿತ್ರ ಸೇರಿದಂತೆ ಯೋಜನೆಗೆ ಸಂಬಂಧಿಸಿದ ಮಾಹಿತಿ ಹಾಗೂ ದರಪಟ್ಟಿ ಒಳಗೊಂಡ ಫಲಕ ಅಳವಡಿಸಬೇಕು. ಯಾವುದೇ ಅಂಗಡಿಯಲ್ಲಿ ಫಲಕ ಅಥವಾ ದರಪಟ್ಟಿ ಇಲ್ಲದಿದ್ದರೆ ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು. ಒಂದು ವಾರದೊಳಗೆ ಎಲ್ಲ ಅಂಗಡಿಗಳಲ್ಲೂ ಅಗತ್ಯ ಫಲಕ ಅಳವಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುವಂತೆ ನಿರಂತರ ಮೇಲ್ವಿಚಾರಣೆ ನಡೆಸಬೇಕು. ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಬೇಕು ಎಂದರು. ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯುತ್ ಕಾಮಗಾರಿ ಕೈಗೊಳ್ಳುವಾಗ ಲೈನ್‌ಮನ್‌ಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ವಿದ್ಯುತ್ ಕಂಬ, ಲೈನ್ ದುರಸ್ತಿ ಸೇರಿದಂತೆ ಅಪಾಯಕಾರಿ ಕಾಮಗಾರಿಗಳಿಗೆ ಯಾವುದೇ ಕಾರಣಕ್ಕೂ ಸಾರ್ವಜನಿಕರನ್ನು ಬಳಸಿಕೊಳ್ಳಬಾರದು. ತರಬೇತಿ ಪಡೆದ ಲೈನ್‌ಮನ್‌ಗಳೇ ಕಾಮಗಾರಿ ನಿರ್ವಹಿಸಬೇಕು ಎಂದು ಸೂಚಿಸಿದರು.

ಹಿಂದೆ ಕೆಇಬಿ ಕಾಮಗಾರಿ ವೇಳೆ ಲೈನ್‌ಮನ್‌ಗಳ ನಿರ್ಲಕ್ಷ್ಯದಿಂದ ಮೂವರು ಸಾರ್ವಜನಿಕರು ಮೃತಪಟ್ಟಿರುವ ಘಟನೆಗಳು ನಡೆದಿವೆ. ಇಂತಹ ದುರ್ಘಟನೆಗಳು ಮರುಕಳಿಸದಂತೆ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಕಾಮಗಾರಿ ನಡೆಯುವ ಸ್ಥಳದಲ್ಲಿ ಸಂಬಂಧಿಸಿದ ಲೈನ್‌ಮನ್ ಹಾಜರಿದ್ದು ಸಂಪೂರ್ಣ ಜವಾಬ್ದಾರಿ ವಹಿಸಬೇಕು ಎಂದರು.

ಜಿಪಂ ಸಿಇಒ ಭುವನೇಶ ಪಾಟೀಲ ಮಾತನಾಡಿ, ನಗರ ವಾರ್ಡ್‌ಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ತಲಾ ಆರು ಸದಸ್ಯರ ಸಮಿತಿ ರಚಿಸಿ ಗ್ಯಾರಂಟಿ ಯೋಜನೆಗಳ ಮೇಲ್ವಿಚಾರಣೆ ನಡೆಸುವಂತೆ ಸೂಚಿಸಿದರು. ಯುವನಿಧಿ ಫಲಾನುಭವಿಗಳಿಗೆ ಮೂರು ತಿಂಗಳ ತರಬೇತಿ ನೀಡಲು ವೇಳಾಪಟ್ಟಿ ಸಿದ್ಧಪಡಿಸುವಂತೆ ತಿಳಿಸಿದರು. ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ ಕಾಪಾಡಿ, ಬಸ್‌ಗಳನ್ನು ಮಾಸಿಕ ಡೀಪ್ ಕ್ಲೀನ್ ಮಾಡುವುದರ ಜೊತೆಗೆ ಸುತ್ತಮುತ್ತ ತಂಬಾಕು ಮುಕ್ತ ಪ್ರದೇಶವನ್ನಾಗಿ ರೂಪಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಿದರು.

ಸಭೆಯಲ್ಲಿ ಪ್ರಾಧಿಕಾರದ ಉಪಾಧ್ಯಕ್ಷರಾದ ಸುಧೀರ ಎಸ್. ಬೋಳಾರ, ಮುರಗಯ್ಯಾ ವಿರಕ್ತಮಠ, ರತ್ನಾ ತೇಗೂರಮಠ, ರೇಹನ್ ರಝಾ ಐನಾಪೂರಿ, ಶಾಂತಪ್ಪ ಎಸ್. ಅಕ್ಕಿ, ಸದಸ್ಯರಾದ ಅರವಿಂದ ಏಗನಗೌಡರ, ಬಸಪ್ಪ ಮಹಾಬಲೇಶ್ವರ ಬಾವಕಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರ ಪರವಾಗಿ ಧ್ವನಿ ಎತ್ತುವ ನಾಯಕರನ್ನು ಬೆದರಿಸುವ ಪ್ರಯತ್ನ ನಡೆಯುತ್ತಿದೆ. ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ರಾಜಕೀಯ ದ್ವೇಷದ ಕ್ರಮ. ಸತ್ಯ ಮತ್ತು ಸಂವಿಧಾನದ ಪರವಾಗಿ ಕಾಂಗ್ರೆಸ್ ಹೋರಾಟ ಮುಂದುವರಿಸಲಿದೆ.
> - ಕೃಷ್ಣಗೌಡ ಪಾಟೀಲ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ

### ಪಂಚ ಗ್ಯಾರಂಟಿಗಳ ಪ್ರಗತಿ

**ಯುವನಿಧಿ:** 13,215 ಅರ್ಜಿಗಳು ಸ್ವೀಕೃತಿ; 11,886 ಫಲಾನುಭವಿಗಳಿಗೆ ₹36.66 ಕೋಟಿ ಡಿಬಿಟಿ ಮೂಲಕ ಜಮೆ

**ಶಕ್ತಿ:** 43.78 ಕೋಟಿ ಮಹಿಳೆಯರಿಂದ ಉಚಿತ ಪ್ರಯಾಣ; ₹966.57 ಕೋಟಿ ಸರ್ಕಾರದಿಂದ ಬಿಡುಗಡೆ

**ಗೃಹಜ್ಯೋತಿ:** 5,73,052 ಫಲಾನುಭವಿಗಳು; ₹825.27 ಕೋಟಿ ಬಿಡುಗಡೆ

**ಗೃಹಲಕ್ಷ್ಮಿ:** 3,77,301 ಫಲಾನುಭವಿಗಳಿಗೆ ₹2,345.74 ಕೋಟಿ ಬಿಡುಗಡೆ

**ಅನ್ನಭಾಗ್ಯ:** 3,75,996 ಫಲಾನುಭವಿಗಳು


### ಹಾಸ್ಟೆಲ್ ವಾರ್ಡನ್, ಪ್ರಾಂಶುಪಾಲರು ಸೇರಿ ಸಂಬಂಧಪಟ್ಟವರ ಪಾತ್ರ ತನಿಖೆಗೆ ಒಳಪಡಿಸಲು ಒತ್ತಾಯ

# ರಂಜಿತಾ ಸಾವಿನ ಸಮಗ್ರ ತನಿಖೆಗೆ ಆಗ್ರಹಿಸಿ ಜಿಲ್ಲಾಧಿಕಾರಿಗೆ ಮನವಿ

**ವಿಜಯಸಾಕ್ಷಿ ಸುದ್ದಿ, ವಿಜಯನಗರ**

ದಾವಣಗೆರೆಯ ಟೀಮ್ ಅಕಾಡೆಮಿ ಹಾಸ್ಟೆಲ್‌ನಲ್ಲಿ ಮೃತಪಟ್ಟಿರುವ ಹೂವಿನಹಡಗಲಿ ತಾಲೂಕಿನ ಕುರುವತ್ತಿ ಗ್ರಾಮದ 17 ವರ್ಷದ ವಿದ್ಯಾರ್ಥಿನಿ ಬಿ. ರಂಜಿತಾ ಅವರ ಸಂಶಯಾಸ್ಪದ ಸಾವಿನ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸುವಂತೆ ಆಗ್ರಹಿಸಿ ಗಂಗಾಮತ ಬೆಸ್ತ ಸಮಾಜದ ಮುಖಂಡರು ಹೆಚ್ಚುವರಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿದ್ದ ರಂಜಿತಾ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ದಾವಣಗೆರೆಯ ಟೀಮ್ ಅಕಾಡೆಮಿಗೆ ಸೇರಿ ಹಾಸ್ಟೆಲ್‌ನಲ್ಲಿ ವಾಸವಾಗಿದ್ದರು. ಸೆ.2ರಂದು ಸಂಜೆ ಸ್ನೇಹಿತೆಯೊಂದಿಗೆ ಹಾಸ್ಟೆಲ್‌ಗೆ ಆಗಮಿಸಿದ ಕೆಲವೇ ಸಮಯದ ಬಳಿಕ ನೇಣು ಹಾಕಿಕೊಂಡ ಸ್ಥಿತಿಯಲ್ಲಿ ಪತ್ತೆಯಾಗಿರುವುದಾಗಿ ರಾತ್ರಿ ವಾರ್ಡನ್ ಕುಟುಂಬದವರಿಗೆ ಮಾಹಿತಿ




ನೀಡಿದ್ದರು. ಘಟನೆಯ ಕುರಿತು ಕುಟುಂಬದವರು ಅನುಮಾನ ವ್ಯಕ್ತಪಡಿಸಿದ್ದು, ಸೆ.3ರಂದು ಮೃತಳ ತಂದೆ ಭೋವಿ ನಿಂಗಪ್ಪ ಪೊಲೀಸರಿಗೆ ದೂರು

> ರಂಜಿತಾ ಅವರ ಸಾವಿನ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ, ಕುಟುಂಬದ ಅನುಮಾನಗಳಿಗೆ ಉತ್ತರ ದೊರೆಯುವಂತೆ ಸಾವಿನ ನಿಖರ ಕಾರಣವನ್ನು ಪತ್ತೆಹಚ್ಚಬೇಕು."
> - ಅಂಬಾಡಿ ನಾಗರಾಜ್, ಮಾಜಿ ಜಿಲ್ಲಾ ಅಧ್ಯಕ್ಷರು, ಗಂಗಾಮತ ಬೆಸ್ತ ಸಮಾಜ

ನೀಡಿದ್ದಾರೆ. ಪ್ರಕರಣ ದಾವಣಗೆರೆ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ 201/2026, ಬಿಎನ್‌ಎಸ್ ಕಲಂ 103(1) ಅಡಿ ದಾಖಲಾಗಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಹಾಸ್ಟೆಲ್ ವಾರ್ಡನ್, ಪ್ರಾಂಶುಪಾಲರು, ಅಧ್ಯಕ್ಷರು ಸೇರಿದಂತೆ ಸಂಬಂಧಪಟ್ಟವರ ಪಾತ್ರವನ್ನು ತನಿಖೆಗೆ ಒಳಪಡಿಸಬೇಕು. ಸಿಸಿಟಿವಿ ದೃಶ್ಯಾವಳಿ, ಮೊಬೈಲ್ ಕರೆ ವಿವರ, ಸಂದೇಶಗಳು, ಮರಣೋತ್ತರ ಪರೀಕ್ಷೆ ಹಾಗೂ ವಿಧಿವಿಜ್ಞಾನ ವರದಿಗಳನ್ನು ಪರಿಶೀಲಿಸಿ ಸಾವಿನ ನಿಖರ ಕಾರಣವನ್ನು ಪತ್ತೆಹಚ್ಚಿ ಸತ್ಯಾಂಶ ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವಿಜಯನಗರ ಜಿಲ್ಲಾ ಗಂಗಾಮತ ಬೆಸ್ತ ಸಮಾಜದ ಅಧ್ಯಕ್ಷ ವೈ. ಯಮುನೇಶ್, ಮುಖಂಡರಾದ ಸರ್ದಾರ್ ಯಮನೂರಪ್ಪ, ನಿವೃತ್ತ ಪಿಎಸ್‌ಐ ಕಬ್ಬೇರ್ ರಾಮಪ್ಪ, ಮಡ್ಡಿ ವೆಂಕಪ್ಪ, ಶ್ರೀಧರ್, ಗಣೇಶ್ ಚಿಕ್ಕಕುರುವತ್ತಿ, ನಿಂಗರಾಜು ಬೆಂಡಿಗೇರಿ, ನಿಂಗಪ್ಪ ಕರಿಯಮ್ಮನವರ, ತಿರುಕಪ್ಪ ಸಿಗ್ಲಿ, ಶಿವು ಕಣಿವಿ, ಹಾಲೇಶ್ ಬೋವಿ, ನಾಗಪ್ಪ ಕಲ್ಲಮ್ಮನವರ, ರಾಜೇಶ್, ವೀರೇಶ್, ಸುರೇಶ್, ಶಶಿ, ಶಿವಕುಮಾರ್, ವೈ. ಜಂಬಯ್ಯ, ಆರ್. ಜಂಬಯ್ಯ, ಎನ್. ಅನಿಲ್, ಎಂ. ರಾಘವೇಂದ್ರ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಸಮಾಜದ ಮುಖಂಡರು ಉಪಸ್ಥಿತರಿದ್ದರು.


# ಕೆರೆ ತುಂಬಿಸಿ, ರೈತರ ಬದುಕು ಹಸನಾಗಿಸಿ; ಸಿಎಂಗೆ ಶಾಸಕ ಮನವಿ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕೂಡ್ಲಿಗಿ ಪಟ್ಟಣದಲ್ಲಿ ನಡೆದ ಪ್ರಜಾಸೇವೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ರೈತರ ಬಹುದಿನಗಳ ನೀರಾವರಿ ಬೇಡಿಕೆ ಈಡೇರಿಸುವ ನಿಟ್ಟಿನಲ್ಲಿ ಮರಬ್ಬೀಹಾಳು ಏತ ನೀರಾವರಿ ಯೋಜನೆಯನ್ನು ತ್ವರಿತವಾಗಿ ಅನುಷ್ಠಾನಗೊಳಿಸುವಂತೆ ಶಾಸಕ ಕೆ. ನೇಮಿರಾಜ್ ನಾಯ್ಕ ಮನವಿ ಸಲ್ಲಿಸಿದರು.

ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮರಬ್ಬೀಹಾಳು ಭಾಗದ ರೈತರ ಬಹುದಿನಗಳ ನೀರಾವರಿ ಬೇಡಿಕೆಯನ್ನು ಪೂರೈಸುವ ದೃಷ್ಟಿಯಿಂದ ಈ ಏತ ನೀರಾವರಿ ಯೋಜನೆ ಅತ್ಯಂತ ಮಹತ್ವದ್ದಾಗಿದೆ. ಯೋಜನೆಯಿಂದ ಸುಮಾರು 850 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವುದರ ಜೊತೆಗೆ ಲಡಕನಬಾವಿ, ವರದಾಪುರ ಹಾಗೂ ಹಂಪಪಟ್ಟಣ ಕೆರೆಗಳಿಗೆ ನೀರು ತುಂಬಿಸುವ ವ್ಯವಸ್ಥೆ ಕಲ್ಪಿಸಲಾಗುತ್ತದೆ.

ಯೋಜನೆಯಲ್ಲಿ ಪಂಪಿಂಗ್ ವ್ಯವಸ್ಥೆ, ವಿದ್ಯುತ್ ಮೂಲಸೌಕರ್ಯ, ರೈಸಿಂಗ್ ಮೇನ್, ಕಾಲುವೆ ಹಾಗೂ ವಿತರಣಾ ವ್ಯವಸ್ಥೆ ಮತ್ತು ಕೆರೆ ಸುಧಾರಣಾ ಕಾಮಗಾರಿಗಳು ಒಳಗೊಂಡಿವೆ. ಇದರಿಂದ ಕ್ಷೇತ್ರದ ಕೃಷಿ ಅಭಿವೃದ್ಧಿಗೆ ಉತ್ತೇಜನ ದೊರೆಯುವುದರೊಂದಿಗೆ ನೀರಿನ ಸಂಗ್ರಹ ಹಾಗೂ ದೀರ್ಘಕಾಲಿಕ ನೀರಿನ ಭದ್ರತೆಗೆ



ಸಹಕಾರಿಯಾಗಲಿದೆ. ಯೋಜನೆಯ ಒಟ್ಟು ಅಂದಾಜು ವೆಚ್ಚ ₹70 ಕೋಟಿ ಆಗಿದೆ.

ಯೋಜನೆಗೆ ಅಗತ್ಯವಿರುವ ನೀರಿನ ಹಂಚಿಕೆಯನ್ನು ತುಂಗಭದ್ರಾ ಮಂಡಳಿ ಈಗಾಗಲೇ ಮಂಜೂರು ಮಾಡಿದ್ದು, ನೀರಿನ ಲಭ್ಯತೆಯೂ ಖಚಿತವಾಗಿದೆ. ಹೀಗಾಗಿ ಹಂಚಿಕೆಯಾಗಿರುವ ನೀರನ್ನು ಸದುಪಯೋಗಪಡಿಸಿಕೊಂಡು ಉದ್ದೇಶಿತ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಮೂಲಸೌಕರ್ಯ ಕಾಮಗಾರಿಗಳನ್ನು ಶೀಘ್ರ ಅನುಷ್ಠಾನಗೊಳಿಸುವ ಅಗತ್ಯವಿದೆ ಎಂದು ಶಾಸಕರು ಮನವಿಯಲ್ಲಿ ತಿಳಿಸಿದ್ದಾರೆ.

ಪ್ರಸ್ತುತ WRD 2024-25 SR ದರಗಳು ಹಾಗೂ ಮಾರ್ಗಸೂಚಿಗಳನ್ವಯ ಡಿಪಿಆರ್ ಪರಿಷ್ಕರಿಸಿ, ಅಗತ್ಯ ತಾಂತ್ರಿಕ ಮತ್ತು ಆಡಳಿತಾತ್ಮಕ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು. ರೈತರ ಹಿತಾಸಕ್ತಿ, ಈಗಾಗಲೇ ಲಭ್ಯವಿರುವ ನೀರಿನ ಹಂಚಿಕೆ ಹಾಗೂ ಕ್ಷೇತ್ರದ ನೀರಾವರಿ ಅಗತ್ಯವನ್ನು ಪರಿಗಣಿಸಿ ಪರಿಷ್ಕೃತ ಡಿಪಿಆರ್‌ಗೆ ಶೀಘ್ರ ಅನುಮೋದನೆ ನೀಡಿ, ಅಗತ್ಯ ಅನುದಾನ ಒದಗಿಸುವ ಮೂಲಕ ಮರಬ್ಬೀಹಾಳು ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸಬೇಕು ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಒತ್ತಾಯಿಸಿದ್ದಾರೆ.

# ಧರ್ಮದ ನಂಬಿಕೆಗೆ ಧಕ್ಕೆ ತರುವ ಹೇಳಿಕೆ ಖಂಡನೀಯ

**ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದೂ ಧರ್ಮ ಹಾಗೂ ಅದರ ಆಚರಣೆಗಳ ಕುರಿತು ಅವಹೇಳನಕಾರಿ ಅಥವಾ ಅಪಮಾನಕರ ಹೇಳಿಕೆ ನೀಡುವುದು ಜವಾಬ್ದಾರಿಯುತ ಸ್ಥಾನದಲ್ಲಿರುವ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿಯವರಿಗೆ ಶೋಭೆ ತರುವುದಿಲ್ಲ ಎಂದು ವಿಶ್ವ ಹಿಂದೂ ಪರಿಷತ್ ಜಿಲ್ಲಾಧ್ಯಕ್ಷ ಮಾರುತಿ ಪವಾರ ಹೇಳಿದರು.

ಪ್ರಜಾಪ್ರಭುತ್ವದಲ್ಲಿ ಪ್ರತಿಯೊಬ್ಬರಿಗೂ ಅಭಿಪ್ರಾಯ ವ್ಯಕ್ತಪಡಿಸುವ ಹಕ್ಕಿದೆ. ಆದರೆ ಯಾವುದೇ ಧರ್ಮದ ನಂಬಿಕೆ, ಆಚರಣೆ ಹಾಗೂ ಭಾವನೆಗಳಿಗೆ ನೋವುಂಟು ಮಾಡುವ ಹೇಳಿಕೆಗಳು ಸಮಾಜದಲ್ಲಿ ಅನಗತ್ಯ ಅಸಮಾಧಾನ ಮತ್ತು ಸಂಘರ್ಷಕ್ಕೆ ಕಾರಣವಾಗಬಹುದು. ಆದ್ದರಿಂದ ಸಚಿವರು ಧಾರ್ಮಿಕ ವಿಚಾರಗಳಲ್ಲಿ ಮಾತನಾಡುವಾಗ ಸಂಯಮ, ಜವಾಬ್ದಾರಿ ಹಾಗೂ ಪರಸ್ಪರ ಗೌರವ ಕಾಪಾಡಬೇಕು ಎಂದರು. ಹಿಂದೂ ಧರ್ಮವನ್ನುಸಚಿವರ ಟೀಕಿಸುವ ಹೆಸರಿನಲ್ಲಿ



ಕೋಟ್ಯಂತರ ಜನರ ನಂಬಿಕೆಗೆ ನೋವುಂಟು ಮಾಡುವ ಹೇಳಿಕೆಗಳನ್ನು ನೀಡುವುದನ್ನು ನಿಲ್ಲಿಸಬೇಕು. ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟಾಗಿದ್ದರೆ ಸಚಿವರು ತಮ್ಮ ಹೇಳಿಕೆಯನ್ನು ಸ್ಪಷ್ಟಪಡಿಸಿ ವಿಷಾದ ವ್ಯಕ್ತಪಡಿಸುವುದು ಸೂಕ್ತ ಎಂದು ಒತ್ತಾಯಿಸಿದರು. ಸಚಿವರು ಎಲ್ಲ ಧರ್ಮಗಳಿಗೂ ಸಮಾನ ಗೌರವ ನೀಡುವುದರೊಂದಿಗೆ, ತಮಗೆ ವಹಿಸಿರುವ ಖಾತೆಯ ಜವಾಬ್ದಾರಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾಗಿ ಜಿಲ್ಲೆಯ ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಬೇಕು. ಜನರ ಸಮಸ್ಯೆಗಳನ್ನು ಪರಿಹರಿಸುವ ಮೂಲಕ ಮೆಚ್ಚುಗೆ ಗಳಿಸಬೇಕೇ ಹೊರತು ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಹೇಳಿಕೆಗಳಿಂದಲ್ಲ ಎಂದರು. ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪರಿಷತ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಭಕ್ತಿಭಾವದಲ್ಲಿ ವೈಭವದ ಚೌಕಿ ಬಸವೇಶ್ವರ ರಥೋತ್ಸವ

**ವಿಜಯಸಾಕ್ಷಿ ಸುದ್ದಿ, ಗದಗ**

ಸಮೀಪದ ತಿಮ್ಮಾಪುರ ಗ್ರಾಮದ ಆರಾಧ್ಯ ದೈವ ಶ್ರೀ ಚೌಕಿ ಬಸವೇಶ್ವರ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವವು ಶ್ರಾವಣ ಮಾಸದ ಕಡೆ ಸೋಮವಾರ ಸಂಜೆ ನೂರಾರು ಭಕ್ತರ ಸಮ್ಮುಖದಲ್ಲಿ ಸಡಗರ, ಸಂಭ್ರಮ ಹಾಗೂ ಶ್ರದ್ಧಾಭಕ್ತಿಯಿಂದ ಜರುಗಿತು.

ಭಜನೆ, ಡೊಳ್ಳು ಹಾಗೂ ವಾದ್ಯಮೇಳಗಳ ಝೇಂಕಾರದ ನಡುವೆ ಮಹಿಳೆಯರು ಆರತಿ, ಕಳಸ ಹಿಡಿದು ದೇವಸ್ಥಾನಕ್ಕೆ ಆಗಮಿಸಿ ಪ್ರದಕ್ಷಿಣೆ ಹಾಕಿದರು. ಗ್ರಾಮದ ಪ್ರಮುಖ ಬೀದಿಗಳಲ್ಲಿ ರಥ ಸಂಚರಿಸುವ ವೇಳೆ ಭಕ್ತರು ಉತ್ತತ್ತಿ, ಬಾಳೆಹಣ್ಣು, ಫಲಪುಷ್ಪಗಳನ್ನು ರಥದ ಮೇಲೆ ಅರ್ಪಿಸಿ 'ಹರ ಹರ ಮಹಾದೇವ', 'ಜೈ ಶ್ರೀ ಚೌಕಿ ಬಸವೇಶ್ವರ ಮಹಾರಾಜಕೀ ಜೈ' ಎಂಬ ಜಯಘೋಷ ಮೊಳಗಿಸಿದರು. ರಥವು ಶ್ರೀ ಚನ್ನಬಸವೇಶ್ವರ ದೇವಸ್ಥಾನದ ಪಾದಗಟ್ಟೆ ತಲುಪಿದ ಬಳಿಕ ಸಿಡಿಮದ್ದು ಸಿಡಿಸಿ ಭಕ್ತರು



ಸಂಭ್ರಮಿಸಿದರು.

ರಥೋತ್ಸವದಲ್ಲಿ ಗ್ರಾಮದ ಹಿರಿಯರು, ಯುವಕರು, ಮಹಿಳೆ ಯರು ಸೇರಿದಂತೆ ನೂರಾರು ಭಕ್ತರು ಪಾಲ್ಗೊಂಡಿದ್ದರು. ಹಿರಿಯರು, ಯುವಕರು, ಮಹಿಳೆಯರು ಸೇರಿದಂತೆ ನೂರಾರು ಭಕ್ತರು ಪಾಲ್ಗೊಂಡಿದ್ದರು.

# ಗ್ರಾಮದೇವತೆಗಳಿಗೆ ಉಡಿ ತುಂಬಿದ ರೇಣುಕಾ ಪ್ರತ್ಯಂಗಿರಾದೇವಿ ಟ್ರಸ್ಟ್



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಸಂಭಾಪುರ ರಸ್ತೆಯಲ್ಲಿ ಶ್ರೀ ರೇಣುಕಾದೇವಿ ಹಾಗೂ ಶ್ರೀ ಮಹಾ ಪ್ರತ್ಯಂಗಿರಾದೇವಿ ದೇವಸ್ಥಾನ ನಿರ್ಮಾಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಶ್ರೀ ರೇಣುಕಾ ಪ್ರತ್ಯಂಗಿರಾದೇವಿ ಟ್ರಸ್ಟ್ ವತಿಯಿಂದ ಗದಗ-ಬೆಟಗೇರಿ ಗ್ರಾಮದೇವತೆಗಳಿಗೆ ಹಾಗೂ ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ದೇವಿ ಆರಾಧಕಿ ಹಾಗೂ ಶ್ರೀ ರೇಣುಕಾ ಪ್ರತ್ಯಂಗಿರಾದೇವಿ ಟ್ರಸ್ಟ್ ಅಧ್ಯಕ್ಷೆ ಅನಿತಾ ಬಾಗಲಕೋಟಿ ಅವರ ನೇತೃತ್ವದಲ್ಲಿ ಗದಗ ಗಂಗಾಪೂರಪೇಟೆಯ ದುರ್ಗಾದೇವಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಉಡಿ ತುಂಬುವ ಕಾರ್ಯಕ್ರಮ ಡೊಳ್ಳು, ಮಂಗಲ ವಾದ್ಯಗಳ ವೈಭವದೊಂದಿಗೆ ನೆರವೇರಿತು.

ಕಾರ್ಯಕ್ರಮದಲ್ಲಿ ಗಂಗಾ ಚಕ್ರಣ್ಣವರ, ಅಶ್ವಿನಿ ಜಗತಾಪ, ರಂಜನಾ ಕೋಟಿ, ಶಾರದಾ ಸಜ್ಜನರ, ವಂದನಾ ವೇರ್ಣೆ ಕರ, ಪಾರ್ವತಿ ಪಟ್ಟಣಶೆಟ್ಟಿ, ಶೋಭಾ ಗುಗ್ಗರಿ, ವಿಜಯಲಕ್ಷ್ಮೀ ಬಾಗಲಕೋಟಿ, ರತ್ನಕ್ಕ ಕರಿಗೌಡ್ರ, ನಿರ್ಮಲಾ ಪಾಟೀಲ, ರೇಖಾ ಜಡಿ, ಅಕ್ಕಮ್ಮ ವಸ್ತ್ರದ, ಶೈಲಾ ಕೊಡೆಕಲ್ಲ, ಸುರೇಖಾ ಪಿಳ್ಳಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಶ್ರೀ ದುರ್ಗಾದೇವಿ ಕಮಿಟಿಯ ಎಂ.ಎಸ್. ಪಾಟೀಲ, ಈಶ್ವರ ಕೋಟಿ, ಯಮನಪ್ಪ ಗೊಂದಿ, ಬಸವರಾಜ ಬೆಳಧಡಿ, ಸಿದ್ದಣ್ಣ ಪಲ್ಲೇದ, ರುದ್ರಪ್ಪ ಕುಂಬಾರ, ಬಸವರಾಜ ಕವಳಿಕಾಯಿ, ಬಸವರಾಜ ಅಣ್ಣಿಗೇರಿ ಉಪಸ್ಥಿತರಿದ್ದರು.

### ಡಿಜೆ ಬದಲು ಜಾನಪದ ಕಲೆ, ಪರಿಸರ ಸ್ನೇಹಿ ಗಣೇಶ ಮೂರ್ತಿಗೆ ಆದ್ಯತೆ ನೀಡಲು ಸಲಹೆ

# ಶಾಂತಿ, ಸೌಹಾರ್ದದಿಂದ ಗಣೇಶೋತ್ಸವ ಆಚರಿಸಿ

**ವಿಜಯಸಾಕ್ಷಿ ಸುದ್ದಿ, ಡಂಬಳ**

ಗಣೇಶೋತ್ಸವವನ್ನು ಸರ್ಕಾರದ ನಿಯಮಾನುಸಾರ ಶಿಸ್ತಿನಿಂದ ಸಂಘಟಿಸಿ, ಯಾವುದೇ ವಿವಾದಕ್ಕೆ ಆಸ್ಪದ ನೀಡದೆ ಶಾಂತಿ, ಸೌಹಾರ್ದದಿಂದ ಆಚರಿಸಬೇಕು. ಹಬ್ಬದ ನೆಪದಲ್ಲಿ ಕಾನೂನು ಉಲ್ಲಂಘನೆಗೆ ಅವಕಾಶ ನೀಡುವುದಿಲ್ಲ ಎಂದು ಮುಂಡರಗಿ ಸಿಪಿಐ ಅಯ್ಯನಗೌಡ ಪಾಟೀಲ ಹೇಳಿದರು.

ಡಂಬಳ ಗ್ರಾಮದ ಪೊಲೀಸ್ ಹೊರಠಾಣೆ ಆವರಣದಲ್ಲಿ ಗಣೇಶೋತ್ಸವದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು, ಗಣೇಶೋತ್ಸವದ ಅಂಗವಾಗಿ ಶಾಲಾ ಮಕ್ಕಳಿಗೆ ಭಾಷಣ, ಗಾಯನ, ರಂಗೋಲಿ ಸೇರಿದಂತೆ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ವಿವಿಧ ಸ್ಪರ್ಧೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಸಲಹೆ ನೀಡಿದರು.

ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಬೇಕು. ಉತ್ತಮ ಮಳೆ-ಬೆಳೆ ಹಾಗೂ ಶುದ್ಧ ಪರಿಸರಕ್ಕಾಗಿ ಪಟಾಕಿ, ಸಿಡಿಮದ್ದುಗಳ ಬಳಕೆಗೆ ನಿಯಂತ್ರಣ ಹೇರಬೇಕು. ಡಿಜೆ



ಸೌಂಡ್ ಸಿಸ್ಟಂಗೆ ಆದ್ಯತೆ ನೀಡುವ ಬದಲು ಗ್ರಾಮೀಣ ಸೊಗಡಿನ ಜಾನಪದ ಕಲೆ, ಡೊಳ್ಳು ಕುಣಿತ ಸೇರಿದಂತೆ ದೇಶಿ ಸಂಸ್ಕೃತಿಯನ್ನು ಬಿಂಬಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಇದರಿಂದ ನಮ್ಮ ಸಾಂಪ್ರದಾಯಿಕ ಕಲೆಗಳು ಉಳಿದು ಬೆಳೆಯಲು ಸಾಧ್ಯವಾಗುತ್ತದೆ. ಅನ್ನಸಂತರ್ಪಣೆ ಸಂದರ್ಭದಲ್ಲಿ ಗಣೇಶೋತ್ಸವ ಸಮಿತಿಯವರು ವಿಶೇಷ ಕಾಳಜಿ ವಹಿಸಬೇಕು ಎಂದರು.

ಸಭೆಯಲ್ಲಿ ಗ್ರಾಮಸ್ಥರು ಹಲವು ಸಮಸ್ಯೆಗಳನ್ನು ಪ್ರಸ್ತಾಪಿಸಿದರು. ಪವಿತ್ರ ಸ್ಥಳವಾದ ಸ್ಮಶಾನದಲ್ಲಿ ಮದ್ಯ ಸೇವಿಸಿ ಬಾಟಲ್‌ಗಳನ್ನು ಎಸೆಯುವುದನ್ನು ತಡೆಯಬೇಕು. ಶಾಲಾ-ಕಾಲೇಜು ಬಿಡುವ ಸಮಯದಲ್ಲಿ ಕೆಲ ಯುವಕರು ಬೈಕ್‌ಗಳಲ್ಲಿ ಬಂದು ದುರ್ವರ್ತನೆ ಮಾಡುವುದಕ್ಕೆ ಕಡಿವಾಣ ಹಾಕಬೇಕು. ಗ್ರಾಮದಲ್ಲಿ ಅಲ್ಲಲ್ಲಿ ಗೋಲಿ ಆಟ, ಬಿಲ್ಲಿ ಆಟದಲ್ಲಿ ಹಣ ಹಚ್ಚಿ ಯುವಕರು ತೊಡಗುತ್ತಿರುವುದರಿಂದ ವಿದ್ಯಾರ್ಥಿಗಳ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಇದನ್ನು ತಡೆಯಬೇಕು ಎಂದು ಆಗ್ರಹಿಸಿದರು. ಅಲ್ಲದೆ, ಗ್ರಾಮದಲ್ಲಿ ಸುಮಾರು 20 ಕಡೆಗಳಲ್ಲಿ ಅಕ್ರಮವಾಗಿ ಮದ್ಯ ಹಾಗೂ ಗಾಂಜಾ ಮಾರಾಟ ನಡೆಯುತ್ತಿದೆ ಎಂಬ ಆರೋಪ ಕೇಳಿಬಂದಿದ್ದು, ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಅಲ್ಲಲ್ಲಿ ಚರಂಡಿ ಗಳು ತುಂಬಿಕೊಂಡಿದ್ದು, ಸ್ವಚ್ಛತೆಗೆ ಕ್ರಮ ಕೈಗೊಳ್ಳಬೇಕು ಎಂದು ಮುಖಂಡರು

> ಹಬ್ಬದ ಸಂಭ್ರಮದ ಹೆಸರಿನಲ್ಲಿ ಕಾನೂನು ಉಲ್ಲಂಘನೆಗೆ ಅವಕಾಶ ನೀಡುವುದಿಲ್ಲ. ಗಣೇಶೋತ್ಸವವನ್ನು ಶಾಂತಿ, ಸೌಹಾರ್ದದಿಂದ ಆಚರಿಸುವುದು ಎಲ್ಲರ ಜವಾಬ್ದಾರಿ.
> - ಅಯ್ಯನಗೌಡ ಪಾಟೀಲ, ಸಿಪಿಐ, ಮುಂಡರಗಿ

ಒತ್ತಾಯಿಸಿದರು. ಮುಖಂಡರ ಅಹವಾಲು ಆಲಿಸಿದ ಸಿಪಿಐ ಅಯ್ಯನಗೌಡ ಪಾಟೀಲ, ಸಮಸ್ಯೆಗಳ ಕುರಿತು ತುರ್ತು ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಉಪತಹಶೀಲ್ದಾರ್ ಎಸ್.ಎಸ್. ಬಿಚಾಲಿ, ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ಗುರುರಾಜ ಚವ್ಹಾಣ, ಪಿಡಿಒ ಪಾರ್ವತಿ ಹೊಂಬಳ, ಬಿಲ್ ಕಲೆಕ್ಟರ್ ಯಲ್ಲಪ್ಪ ಹಾದಿಮನಿ, ಯುವ ಮುಖಂಡ ಬಸವರಡ್ಡಿ ಬಂಡಿಹಾಳ, ಮಹೇಶ ಬಿಸನಳ್ಳಿ, ಬಶೀರಹಮ್ಮದ ತಾಂಬೋಟಿ, ಪ್ರಕಾಶ ಕೋತಂಬ್ರಿ, ಬಸವಂತಪ್ಪ ಪಟ್ಟಣಶೆಟ್ಟರ, ಶಿವಾನಂದ ಬಂಡಿ, ಉಮೇಶ ಹಾದಿಮನಿ, ಮುತ್ತು ಮಠದ, ಹನಮಂತಪ್ಪ ಚವಡಕಿ, ರಾಚಪ್ಪ ಅಂಗಡಿ, ನವೀನ ಕರದಾನಿ, ಕಾಶಿಮಲಿ ಬೆನಕೊಪ್ಪ, ಮಾಂತೇಶ ಬಂಡಿ, ಸಂತೋಷ ಕೊಳ್ಳಾರ ಸೇರಿದಂತೆ ಹಲವರು ಹಾಗೂ ಪೊಲೀಸ್ ಸಿಬ್ಬಂದಿ ಎಸ್.ಎಚ್. ಕಂಚಗಾರ, ಆನಂದ ಲಮಾಣಿ, ಬಾಬುಜಾನ ಕಮ್ಮಾರ, ನಿಂಗಪ್ಪ ಪೂಜಾರ ಇದ್ದರು.

# ಸಾವಿನಲ್ಲೂ ಸಾರ್ಥಕತೆ ಮೆರೆದ ನಿವೃತ್ತ ಬ್ಯಾಂಕ್ ವ್ಯವಸ್ಥಾಪಕ

**ವಿಜಯಸಾಕ್ಷಿ ಸುದ್ದಿ, ಗದಗ**

ಬದುಕಿನುದ್ದಕ್ಕೂ ಸೇವಾ ಮನೋಭಾವ ಮೆರೆದಿದ್ದ ಸಹಕಾರಿ ಬ್ಯಾಂಕ್‌ನ ನಿವೃತ್ತ ವ್ಯವಸ್ಥಾಪಕ ಗುರಪ್ಪ ಬಸವಣ್ಣೆಪ್ಪ ಅಂಗಡಿ (78) ಅವರು ಸಾವಿನಲ್ಲೂ ಸಾರ್ಥಕತೆ ಮೆರೆದಿದ್ದಾರೆ. ಸೆ. 2ರಂದು ನಿಧನರಾದ ಅವರ ಸ್ವಇಚ್ಛೆಯಂತೆ ಕುಟುಂಬದವರು ನೇತ್ರದಾನ ಹಾಗೂ ದೇಹದಾನ ಮಾಡುವ ಮೂಲಕ ಮಾನವೀಯ ಮೌಲ್ಯಕ್ಕೆ ಮಾದರಿಯಾಗಿದ್ದಾರೆ.

ಗದುಗಿನ ಹಾತಲಗೇರಿ ನಾಕಾ ಸಮೀಪದ ನಿವಾಸಿಯಾಗಿದ್ದ ಅಂಗಡಿ ಅವರ ನಿಧನದ ಬಳಿಕ ಕುಟುಂಬದವರ ಒಪ್ಪಿಗೆಯೊಂದಿಗೆ ತಜ್ಞ ವೈದ್ಯರ ತಂಡ ನೇತ್ರದಾನದ ಪ್ರಕ್ರಿಯೆ ನೆರವೇರಿಸಿತು. ಬಳಿಕ ಸೆ. 3ರಂದು ಅವರ ದೇಹವನ್ನು ವೈದ್ಯಕೀಯ ವಿದ್ಯಾರ್ಥಿಗಳ ಅಂಗರಚನಾ ಶಾಸ್ತ್ರ ಅಧ್ಯಯನಕ್ಕಾಗಿ ಗದಗಿನ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ದಾನ ಮಾಡಲಾಯಿತು.

ನಮ್ಮ ಬದುಕು ಮುಗಿದರೂ ಮತ್ತೊಬ್ಬರ ಬದುಕಿಗೆ ನೆರವಾಗಲಿ ಎಂಬ ಮಾನವೀಯ ಸಂದೇಶ ಸಾರುವಂತೆ ಅಂಗಡಿ ಕುಟುಂಬದ ಈ ನಿರ್ಧಾರ ಗಮನ ಸೆಳೆದಿದೆ. ಮೃತರ ಕೊನೆಯ ಇಚ್ಛೆಯನ್ನು ಗೌರವಿಸಿ ಕುಟುಂಬದವರು ಕೈಗೊಂಡ ನೇತ್ರದಾನ ಹಾಗೂ ದೇಹದಾನವು ಸಮಾಜಕ್ಕೆ ಸೇವಾ ಮನೋಭಾವ, ದಾನಧರ್ಮ ಮತ್ತು ಮಾನವೀಯತೆಯ ಮಹತ್ವವನ್ನು ಸಾರಿದೆ.

**ಸಂಕ್ಷಿಪ್ತ ಸುದ್ದಿಗಳು**

# ಸಂಭ್ರಮದಿಂದ ಜರುಗಿದ ಹಾಲಗೊಂಡ ಬಸವೇಶ್ವರ ರಥೋತ್ಸವ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ಐತಿಹಾಸಿಕ ಹಾಲಗೊಂಡ ಬಸವೇಶ್ವರ ರಥೋತ್ಸವ ಶ್ರಾವಣ ಕೊನೆ ಸೋಮವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಭಕ್ತಿ ಭಾವ ಹಾಗೂ ಸಂಭ್ರಮದಿಂದ ವಿಜೃಂಭಣೆಯಿಂದ ಜರುಗಿತು. ಗ್ರಾಮದ ಬಜಾರ್ ರಸ್ತೆಯಲ್ಲಿ ಸಾಗಿದ ರಥೋತ್ಸವಕ್ಕೆ ಹರ್ಲಾಪುರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಮಹಾಸ್ವಾಮೀಜಿ ಧಾರ್ಮಿಕ ವಿಧಿ-ವಿಧಾನಗಳನ್ನು ನೆರವೇರಿಸಿ ಚಾಲನೆ ನೀಡಿದರು. ಭಕ್ತರು ತೇರಿಗೆ ಉತ್ತತ್ತಿ ಎಸೆದು ತಮ್ಮ ಸಂಕಲ್ಪ ಅರ್ಪಿಸಿದರು. 'ಹರ ಹರ ಮಹಾದೇವ', 'ಹಾಲಗೊಂಡ ಬಸವೇಶ್ವರ ಮಹಾರಾಜಕೀ ಜೈ' ಎಂಬ ಘೋಷಣೆಗಳೊಂದಿಗೆ ಭಕ್ತರು ತೇರನ್ನು ಎಳೆದರು. ರಥ-'ೋತ್ಸವದಲ್ಲಿ ಡೊಳ್ಳು ಮೇಳ, ಭಾಜಾ ಕಲಾ ಮೇಳ ಸೇರಿದಂತೆ ವಿವಿಧ ಜನಪದ ಕಲಾ ತಂಡಗಳು ಭಾಗವಹಿಸಿ ಮೆರುಗು ತಂದವು. ಸರಕಾರಿ ಹೆಣ್ಣುಮಕ್ಕಳ ಶಾಲೆಯಿಂದ ವಿರೂಪಾಕ್ಷೇಶ್ವರ ದೇಗುಲದವರೆಗೆ ತೇರು ಸಾಗಿತು. ಇದಕ್ಕೂ ಮುನ್ನ ಸಾಂಪ್ರದಾಯಿಕವಾಗಿ ಶೇಡದವರ ಕುಟುಂಬದವರು ದೇವಸ್ಥಾನಕ್ಕೆ ನೈವೇದ್ಯ ಅರ್ಪಿಸಿದರು. ಬಳಿಕ ವಿರೂಪಾಕ್ಷೇಶ್ವರ ದೇವಸ್ಥಾನದಿಂದ ಪಾಲಕಿಯನ್ನು ತೆಗೆದುಕೊಂಡು ಬಂದು ತೇರಿಗೆ ಐದು ಸುತ್ತು ಪ್ರದಕ್ಷಿಣೆ ಹಾಕಲಾಯಿತು.ಬೆಳಿಗ್ಗೆ ವಿವಿಧ ಹೂವುಗಳಿಂದ ಅಲಂಕರಿಸಲಾಗಿದ್ದ ಬಸವೇಶ್ವರ ಮೂರ್ತಿಗೆ ಶರಣಯ್ಯ ಪತ್ರಿಮಠ ಅವರ ನೇತೃತ್ವದಲ್ಲಿ ರುದ್ರಾಭಿಷೇಕ ನೆರವೇರಿಸಲಾಯಿತು. ನಂತರ ಸಿದ್ಧ ಸಮಾಧಿ ಯೋಗ ಸಾಧಕರ ಬಳಗ ಹಾಗೂ ಅನ್ನಪೂರ್ಣೇಶ್ವರಿ ಸತ್ಸಂಗ ಸಮಿತಿಯಿಂದ ರಾಘವೇಂದ್ರ ಕೊಪ್ಪಳ ಅವರ ನೇತೃತ್ವದಲ್ಲಿ ಮಹಾ ಮೃತ್ಯುಂಜಯ ಹೋಮ ನೆರವೇರಿತು. ಬಳಿಕ ಭಕ್ತರಿಗೆ ಅನ್ನಸಂತರ್ಪಣೆ ನಡೆಯಿತು.

# ಬಾಲ್ಯ ವಿವಾಹದ ವಿರುದ್ಧದ ಹೋರಾಟಕ್ಕೆ ವಿಶ್ವಸಂಸ್ಥೆ ಮಾನ್ಯತೆ!

**ವಿಜಯಸಾಕ್ಷಿ ಸುದ್ದಿ, ಗದಗ**

ಬಾಲ್ಯ ವಿವಾಹ, ಬಾಲ್ಯಾವಸ್ಥೆಯಲ್ಲಿನ ಹಾಗೂ ಬಲವಂತದ ವಿವಾಹಗಳ ನಿರ್ಮೂಲನೆಗಾಗಿ ನವೆಂಬರ್ 27ನ್ನು ಅಂತರರಾಷ್ಟ್ರೀಯ ದಿನವನ್ನಾಗಿ ಘೋಷಿಸಿರುವ ವಿಶ್ವಸಂಸ್ಥೆಯ ನಿರ್ಧಾರವನ್ನು ಸ್ಪಂದನಾ ಅಸೋಸಿಯೇಷನ್ ಸ್ವಾಗತಿಸಿದೆ.

ಜಸ್ಟ್ ರೈಟ್ಸ್ ಫಾರ್ ಚಿಲ್ಡ್ರನ್ (JRC) ಪಾಲುದಾರ ಸಂಸ್ಥೆಯಾಗಿರುವ ಸ್ಪಂದನಾ ಅಸೋಸಿಯೇಷನ್, ಹಲವು ವರ್ಷಗಳಿಂದ ಬಾಲ್ಯ ವಿವಾಹದ ವಿರುದ್ಧ ಜಾಗೃತಿ ಹಾಗೂ ತಡೆ ಕಾರ್ಯದಲ್ಲಿ ತೊಡಗಿಸಿಕೊಂಡಿದೆ. ಶಿಕ್ಷಕರ ದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕಿ ವಿ.ಸುಶೀಲಾ ಮಾತನಾಡಿ, "ಭಾರತದಿಂದ ಮೊಳಗಿದ ಧ್ವನಿ ಇಂದು ಜಾಗತಿಕ ಸಂಕಲ್ಪವಾಗಿ ರೂಪುಗೊಂಡಿದೆ. ನ.27ನ್ನು ಬಾಲ್ಯ ವಿವಾಹ ನಿರ್ಮೂಲನೆಗೆ ಮೀಸಲಾದ ಜಾಗತಿಕ ದಿನವಾಗಿ ಘೋಷಿಸಿರುವುದು ಹೆಮ್ಮೆಯ ಸಂಗತಿ. ಆದರೆ ಇದು ಸಂಭ್ರಮಿಸಿ ನಮ್ಮ ಕಾರ್ಯ ನಿಲ್ಲಿಸುವ ಸಮಯವಲ್ಲ" ಎಂದರು. 2024ರ ನ.27ರಂದು ಭಾರತ ಸರ್ಕಾರವು ಎಖಅ ಪಾಲುದಾರ ಸಂಸ್ಥೆಗಳ ಸಹಭಾಗಿತ್ವದಲ್ಲಿ 'ಬಾಲ್ಯ ವಿವಾಹ ಮುಕ್ತ ಭಾರತ' ಅಭಿಯಾನ ಆರಂಭಿಸಿತ್ತು. ಬಾಲ್ಯ ವಿವಾಹ ತಡೆಗೆ ಶಾಲೆಗಳು, ಗ್ರಾಮ ಪಂಚಾಯಿತಿಗಳು ಹಾಗೂ ಗ್ರಾಮಗಳಲ್ಲಿ ಜಾಗೃತಿ ಮೂಡಿಸುವುದು, ಅಪಾಯದಲ್ಲಿರುವ ಕುಟುಂಬಗಳನ್ನು ಸರ್ಕಾರದ ಕಲ್ಯಾಣ ಯೋಜನೆಗಳಿಗೆ ಸಂಪರ್ಕಿಸುವುದು ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಸೇರಿಸುವ ಕಾರ್ಯಗಳನ್ನು ಸಂಸ್ಥೆ ಕೈಗೊಂಡಿದೆ ಎಂದು ತಿಳಿಸಿದರು.

JRC ಸಂಸ್ಥಾಪಕ ಭುವನ್ ರಿಭು ಅವರ ಜಾಗತಿಕ ಅಭಿಯಾನದ ಫಲವಾಗಿ, ಸಿಯೆರಾ ಲಿಯೋನ್ ಸುಮಾರು 67 ರಾಷ್ಟ್ರಗಳ ಬೆಂಬಲದೊಂದಿಗೆ ವಿಶ್ವಸಂಸ್ಥೆಯಲ್ಲಿ ನಿರ್ಣಯ ಮಂಡಿಸಿದ್ದು, ಸೆ.4ರಂದು ನಿರ್ಣಯ ಅಂಗೀಕಾರಗೊಂಡಿದೆ. ಭಾರತದಲ್ಲಿ ಎಖಅ ಪಾಲುದಾರ ಸಂಸ್ಥೆಗಳು 782 ಜಿಲ್ಲೆಗಳಲ್ಲಿ ಸರ್ಕಾರದ ಸಹಭಾಗಿತ್ವದಲ್ಲಿ ಕಾರ್ಯನಿರ್ವಹಿಸುತ್ತಿದ್ದು, 5.5 ಲಕ್ಷಕ್ಕೂ ಅಧಿಕ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಸಹಕಾರಿಯಾಗಿವೆ ಎಂದು ಸಂಸ್ಥೆ ತಿಳಿಸಿದೆ. NFHS-5ರಲ್ಲಿ 20-24 ವರ್ಷದ ಮಹಿಳೆಯರಲ್ಲಿ 18 ವರ್ಷಕ್ಕೂ ಮುನ್ನ ವಿವಾಹವಾಗಿದ್ದವರ ಪ್ರಮಾಣ ಶೇ.23.3ರಷ್ಟಿದ್ದರೆ, ಓಈಲೂಖ-6ರಲ್ಲಿ ಅದು ಶೇ.20.1ಕ್ಕೆ ಇಳಿಕೆಯಾಗಿದೆ. 2030ರೊಳಗೆ ಬಾಲ್ಯ ವಿವಾಹ ನಿರ್ಮೂಲನೆ ಜಾಗತಿಕ ಬದ್ಧತೆಯೂ ಇದೆ.

## ಶ್ರೀಕ್ಷೇತ್ರ ವರವಿ ಮೌನೇಶ್ವರ ಜಾತ್ರಾಮಹೋತ್ಸವಕ್ಕೆ ಚಾಲನೆ

# ಸಮಾನತೆ-ಸಹಬಾಳ್ವೆಯ ಸಂದೇಶ ಸಾರಿದ ಮೌನೇಶ್ವರರು

**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜದಲ್ಲಿ ಸೌಹಾರ್ದತೆ, ಸಮಾನತೆ ಹಾಗೂ ಸಹಬಾಳ್ವೆ ಬೆಳೆಸುವಲ್ಲಿ ಜಾತ್ರಾಮಹೋತ್ಸವಗಳ ಪಾತ್ರ ಮಹತ್ವದ್ದಾಗಿದೆ. ಜಗತ್ತಿಗೆ ಸಮಾ ನತೆ, ಸಹಬಾಳ್ವೆ, ಭಾತೃತ್ವ ಹಾಗೂ ಸಾಮರಸ್ಯದ ಸಂದೇಶ ಸಾರಿದ ಶ್ರೀಕ್ಷೇತ್ರ ವರವಿ ಜಗದ್ಗುರು ಮೌನೇಶ್ವರರ ಜಾತ್ರಾಮಹೋತ್ಸವದಲ್ಲಿ ಪಾಲ್ಗೊಳ್ಳುವುದು ಧನ್ಯತೆಯ ಸಂಗತಿ ಎಂದು ಹೊಳೆ ಇಟಗಿಯ ಹಿರಿಯ ಮುಖಂಡ ಸಣ್ಣವೀರಪ್ಪ ಫ. ಹಳ್ಳೆಪ್ಪನವರ ಹೇಳಿದರು.

ಶ್ರೀಕ್ಷೇತ್ರ ವರವಿಯ ಮೌನೇಶ್ವರ ದೇವಸ್ಥಾನದಲ್ಲಿ 2026ನೇ ಸಾಲಿನ ಜಾತ್ರಾಮಹೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದ ಮೂಲೆಮೂಲೆಗಳಿಂದ ಭಕ್ತರು ಜಾತ್ರೆಗೆ ಆಗಮಿಸಿ ಮೌನೇಶ್ವರರಿಗೆ ಭಕ್ತಿ ಸಮರ್ಪಿಸುತ್ತಾರೆ. ಸ್ಥಳೀಯ ಜನಪ್ರತಿನಿಧಿಗಳೂ ಜಾತ್ರಾಮಹೋತ್ಸವದ ಆಹ್ವಾನಕ್ಕೆ ಗೌರವ ನೀಡಿ ಭಾಗವಹಿಸಬೇಕು. ಇದು ನಮ್ಮ ಮಠದ ಜಾತ್ರೆ ಎಂಬ ಭಾವನೆಯೊಂದಿಗೆ ಪಾಲ್ಗೊಂಡು ಮೌನೇಶ್ವರರ ಕೃಪೆಗೆ ಪಾತ್ರರಾಗಬೇಕು ಎಂದರು.




ಎಲ್ಲರೊಂದಿಗೆ ಅರಿತು ಬೆರೆತು ಬಾಳುವ ವಿಶ್ವಕರ್ಮ ಸಮಾಜ ಬಹುದೊಡ್ಡ ಸಮಾಜ. ಬೇರೆಯವರನ್ನು ತಿದ್ದಿ, ತೀಡಿ, ಬುದ್ಧಿಹೇಳಿ ಮೂರ್ತಿ ಮಾಡುವ ಬುದ್ಧಿವಂತಿಕೆ ಹೊಂದಿರುವ ಈ ಸಮಾಜದ ಬಗ್ಗೆ ಎಲ್ಲರೂ ಅಭಿಮಾನ ಹೊಂದಬೇಕು ಎಂದು ಹಳ್ಳೆಪ್ಪನವರ ಹೇಳಿದರು.

ವಿಶೇಷ ಆಹ್ವಾನಿತರಾಗಿ ಪಾಲ್ಗೊಂಡ ಬಾಗಲಕೋಟೆಯ ವೈದ್ಯ ಡಾ. ವಿನೋದ ಅಕ್ಕಸಾಲಿ ಮಾತನಾಡಿ, ಸಮಾಜ ಹಾಗೂ ಸರ್ಕಾರದ ವ್ಯವಸ್ಥೆಯಲ್ಲಿ ಉತ್ತಮ ಸ್ಥಾನದಲ್ಲಿದ್ದು ಸೇವೆ ಸಲ್ಲಿಸುತ್ತಿರುವವರನ್ನು ಗುರುತಿಸಿ ಗೌರವಿಸುತ್ತಿರುವುದು ಸಂತಸದ ಸಂಗತಿ. ವಿಶ್ವಕರ್ಮ ಸಮಾಜ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಯುವ ಜನರು ಮಾದಕ ವ್ಯಸನಗಳಿಗೆ ಮಾರುಹೋಗಬಾರದು ಎಂದು ಕರೆ ನೀಡಿದರು.

ಪೊಲೀಸ್ ಇಲಾಖೆಯ ರಾಜ್ಯಮಟ್ಟದ ಪುರಸ್ಕಾರಕ್ಕೆ ಭಾಜನರಾದ ವಿಶ್ವನಾಥ ಬಡಿಗೇರ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಇಲಾಖೆ ನೀಡಿದ ಗೌರವವನ್ನು ಸಮಾಜಕ್ಕೆ ಅರ್ಪಿಸುವೆ. ಸಾಧಕರನ್ನು ಗೌರವಿಸುವುದರಿಂದ ಇನ್ನಷ್ಟು ಸಾಧನೆಗೆ ಪ್ರೇರಣೆ ದೊರೆಯುತ್ತದೆ. ಇಂತಹ ಪವಿತ್ರ ಕ್ಷೇತ್ರದಲ್ಲಿ ಆಶೀರ್ವಾದ ದೊರೆತಿರುವುದು ಧನ್ಯತಾ ಭಾವ ಮೂಡಿಸಿದೆ ಎಂದರು.

> ನಾವು ಎಷ್ಟೇ ಬುದ್ಧಿವಂತರಾಗಿದ್ದರೂ ಶಿಕ್ಷಣವಿಲ್ಲದಿದ್ದರೆ ಪ್ರಯೋಜನವಿಲ್ಲ. ಆದ್ದರಿಂದ ನಮ್ಮ ಸಮಾಜ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು.
> - ಡಾ. ವಿನೋದ ಅಕ್ಕಸಾಲಿ, ವೈದ್ಯರು, ಬಾಗಲಕೋಟೆ

ವರವಿ ಜಗದ್ಗುರು ಮೌನೇಶ್ವರ ದೇವಸ್ಥಾನ ಹಾಗೂ ಮಠದ ವಿಕಾಸ ಟ್ರಸ್ಟ್ ಕಮಿಟಿ ಅಧ್ಯಕ್ಷ ಮೋಹನ ಸಿ. ನರಗುಂದ ಪ್ರಾಸ್ತಾವಿಕವಾಗಿ ಮಾತನಾಡಿ, ನಾಡಿನ ಮಠಾಧಿಪತಿಗಳು, ಪೀಠಾಧಿಪತಿಗಳು ಹಾಗೂ ಹರಗುರು ಚರಮೂರ್ತಿಗಳ ಸಾನ್ನಿಧ್ಯದಲ್ಲಿ ಸಮಸ್ತ ಭಕ್ತರ ಸಮ್ಮುಖದಲ್ಲಿ ಜಾತ್ರಾಮಹೋತ್ಸವ ಶ್ರದ್ಧೆ-ಭಕ್ತಿಯಿಂದ ವಿಜೃಂಭಣೆಯಿಂದ ನಡೆಯುತ್ತಿದೆ. ಸಹಕಾರ ನೀಡಿದ ಎಲ್ಲರಿಗೂ ಮೌನೇಶ್ವರರು ಸನ್ಮಂಗಲವನ್ನುಂಟು ಮಾಡಲಿ ಎಂದರು.

ಶಿರಹಟ್ಟಿ ಪಿಎಸ್ಐ ಈರಣ್ಣ ರಿತ್ತಿ, ಚಿಕ್ಕಮಗಳೂರಿನ ರೈತ ಸೇನೆಯ ರಾಜ್ಯಾಧ್ಯಕ್ಷ ಚಂದ್ರಶೇಖರ ಹಾಗೂ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಗದಗ ಜಿಲ್ಲಾ ಅಧ್ಯಕ್ಷ ದೇವೇಂದ್ರಪ್ಪ ಹ. ಬಡಿಗೇರ ಮಾತನಾಡಿದರು.

ವಿಜಯಪುರ ಮೂರು ಜಾವದೀಶ್ವರ ಮಠದ ಶ್ರೀ ಮಹೇಂದ್ರ ಮಹಾಸ್ವಾಮೀಜಿ, ಲೇಬಗಿರಿ ಲಕ್ಷ್ಮೀಂದ್ರಸ್ವಾಮಿಗಳ ಮಠದ ಶ್ರೀ ನಾಗಮೂರ್ತೇಂದ್ರ ಮಹಾಸ್ವಾಮೀಜಿ ಹಾಗೂ ಹುಬ್ಬಳ್ಳಿ ವೇ.ಬ್ರ. ಶ್ರೀ ಶಂಕರಾಚಾರ್ಯ ಗು. ಕಡ್ಲಾಸ್ಕರ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ವಿಶ್ವಕರ್ಮ ಸಮಾಜದ ಮುಖಂಡ ಮುತ್ತಣ್ಣ ಬಡಿಗೇರ ಸೇರಿದಂತೆ ಟ್ರಸ್ಟ್ ಕಮಿಟಿಯ ಪದಾಧಿಕಾರಿಗಳು, ಸದಸ್ಯರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಪಾಲ್ಗೊಂಡಿದ್ದರು. ಶಿಕ್ಷಕ ಸತೀಶ ಹೊರಪೇಟೆ ಪ್ರಾರ್ಥಿಸಿದರು.

ಮೋಹನ ಸಿ. ನರಗುಂದ ಸ್ವಾಗತಿಸಿದರು. ಪ್ರಾಧ್ಯಾಪಕ ವಿಶ್ವನಾಥ ಯ. ಕಮ್ಮಾರ ನಿರೂಪಿಸಿದರು. ಚಂದ್ರಕಾಂತ ಸೋನಾರ ವಂದಿಸಿದರು.

## ಜಾತಿ-ಮತ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹ

# ಲಿಂಗಾಯತ ಮಠಗಳಿಂದ ಶೈಕ್ಷಣಿಕ ಕ್ರಾಂತಿ



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕದಲ್ಲಿ ಶೈಕ್ಷಣಿಕ ಕ್ರಾಂತಿ ಆಗಿದ್ದರೆ ಅದಕ್ಕೆ ಲಿಂಗಾಯತ ಮಠಗಳ ಕೊಡುಗೆ ಅಪಾರ. ಸ್ವಾತಂತ್ರ್ಯಪೂರ್ವದಲ್ಲೇ ಜಾತಿ-ಮತ ಭೇದವಿಲ್ಲದೆ ಪ್ರಸಾದ ನಿಲಯಗಳನ್ನು ತೆರೆದು ಬಡ ಮಕ್ಕಳಿಗೆ ಅನ್ನದಾಸೋಹದ ಜತೆಗೆ ಜ್ಞಾನದಾಸೋಹ ನೀಡಿದ ಪರಂಪರೆ ನಮ್ಮದು ಎಂದು ಗದುಗಿನ ತೋಂಟದಾರ್ಯ ಮಠದ ಪೂಜ್ಯ ಜ.ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಗದುಗಿನ ಹಾಲಕೆರೆ ಮಠದ ಆನಂದಾಶ್ರಮದಲ್ಲಿ ಭಾನುವಾರ ನಡೆದ ಪೂಜ್ಯ ಅನ್ನದಾನ ಮಹಾಶಿವಯೋಗಿಗಳ 49ನೇ ಪುಣ್ಯಾರಾಧನೆ ಹಾಗೂ ನರೇಗಲ್ಲಿನ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಮಿತಿಯ ಅನ್ನದಾನೇಶ್ವರ ಪದವಿ ಪೂರ್ವ ವಿಜ್ಞಾನ ಕಾಲೇಜಿನ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶಿಕ್ಷಣದ ಜತೆಗೆ ಸಂಸ್ಕಾರ ನೀಡುವುದೇ ಮಠಗಳ ವೈಶಿಷ್ಟ್ಯ. ಮಕ್ಕಳು ವಿದ್ಯಾವಂತರಾಗಿ, ಜ್ಞಾನವಂತರಾಗಿ, ಶ್ರೇಷ್ಠ ವಿಜ್ಞಾನಿಗಳಾಗಬೇಕು ಎಂಬ ಉದ್ದೇಶದಿಂದ ಈ ಮಹಾವಿದ್ಯಾಲಯ ಆರಂಭಿಸಲಾಗಿದೆ.

ಆನಂದಾಶ್ರಮದಲ್ಲಿ ಕಲಿತವರು ಜೀವನದುದ್ದಕ್ಕೂ ಆನಂದ ಪಡೆಯಲಿ ಎಂದರು. ಪೂಜ್ಯ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳ ಅನ್ನದಾಸೋಹ-ಜ್ಞಾನದಾಸೋಹದ ಸೇವೆಯನ್ನು ಶ್ಲಾಘಿಸಿದ ಅವರು, ವಯಸ್ಸಿನಲ್ಲಿ ಚಿಕ್ಕವರಾದರೂ ಜ್ಞಾನದಲ್ಲಿ ಹಿರಿಯರು ಎಂದು ಬಣ್ಣಿಸಿದರು.

90 ವರ್ಷ ಚೈತನ್ಯದಿಂದ ಬದುಕಿದ ಅನ್ನದಾನ ಶಿವಯೋಗಿಗಳು (ಬೆತ್ತದ ಅಜ್ಜ) 87ನೇ ವಯಸ್ಸಿನಲ್ಲೂ ಹಳ್ಳಿ-ಹಳ್ಳಿಗೆ ತೆರಳಿ ಭಿಕ್ಷೆ ಬೇಡಿ ವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ 13 ಬೋರ್ಡಿಂಗ್‌ಗಳನ್ನು ಮುನ್ನಡೆಸಿದ ಮಹಾನ್ ಸಾಧಕರು. ಅವರ ಜೀವನಾಧಾರಿತ ಸಿನಿಮಾ ಆರು ತಿಂಗಳಲ್ಲಿ ಬಿಡುಗಡೆಯಾಗಲಿದೆ ಎಂದು ತೋಂಟದ ಶ್ರೀಗಳು ತಿಳಿಸಿದರು.

> ಪರಿಶ್ರಮಕ್ಕೆ ಶಾರ್ಟ್‌ಕಟ್ ಇಲ್ಲ. ಗಿಡ ಹತ್ತಿದರೆ ಹಣ್ಣು ಸಿಗುತ್ತದೆ; ಕೆಳಗೆ ಮಲಗಿದರೆ ಸಿಗುವುದಿಲ್ಲ. ವಿದ್ಯಾರ್ಥಿಗಳು ಪ್ರಯತ್ನದಿಂದ ಜ್ಞಾನ ಸಂಪಾದಿಸಿ, ತಂದೆ-ತಾಯಿ ಹಾಗೂ ಗುರುಹಿರಿಯರನ್ನು ಗೌರವಿಸಿ, ಬದುಕಿನಲ್ಲಿ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು.
> - ಜ.ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ತೋಂಟದಾರ್ಯ ಮಠ, ಗದಗ

ಸಾನ್ನಿಧ್ಯ ವಹಿಸಿದ್ದ ಪೂಜ್ಯ ಜ.ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಮಾತನಾಡಿ, ವಿದ್ಯಾರ್ಥಿಗಳು ಏಕಾಗ್ರತೆಯಿಂದ ಅಭ್ಯಾಸ ಮಾಡಿ ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು. ಶಿಕ್ಷಣವೇ ಬದುಕಿನ ಪೋಷಕಾಂಶ ಎಂದರು. ಕಾರು, ಬಂಗಲೆಗಳ ಕನಸಿಗಿಂತ ಆದರ್ಶವಾಗಿ ಬದುಕುವ ಕನಸು ಕಾಣಬೇಕು. ಸಮಯವನ್ನು ವ್ಯರ್ಥ ಮಾಡದೆ ಮುನ್ನಡೆಯಬೇಕು ಎಂದು ಸಲಹೆ ನೀಡಿದರು.

ಪ್ರಾ. ಎಂ.ಸಿ. ಕಟ್ಟಿಮನಿ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಎಸ್.ಪಿ. ಸಂಶಿಮಠ ಸಂದರ್ಭೋಚಿತವಾಗಿ ಮಾತನಾಡಿದರು. ವೇದಿಕೆಯಲ್ಲಿ ಮಹೇಶ್ವರ ಸ್ವಾಮಿಗಳು, ಡಾ.ಜಿ.ಕೆ. ಕಾಳೆ, ಆರ್.ಬಿ. ಪಾಟೀಲ, ಜಿ.ಎನ್. ಪಾಟೀಲ, ಡಿಡಿಪಿಐ ಆರ್.ಎಸ್. ಬುರಡಿ, ಡಾ.ಬಿ.ಎನ್. ಪಾಟೀಲ, ವ್ಹಿ.ಆರ್. ಪಾಟೀಲ, ಶರಣಬಸಪ್ಪ ಗುಡಿಮನಿ, ಗಿರೀಶಗೌಡ ಪಾಟೀಲ, ಈಶಣ್ಣ ಮುನವಳ್ಳಿ, ಸದು ಮದರಿಮಠ ಮತ್ತಿತರರು ಉಪಸ್ಥಿತರಿದ್ದರು.

ಗಣ್ಯರು, ಭಕ್ತರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ರಾತ್ರಿ 10ರೊಳಗೆ ವಿಸರ್ಜನೆ ಕಡ್ಡಾಯ; ಐಶ್ವರ್ಯ ನಾಗರಾಳ

# ಗಣೇಶೋತ್ಸವಕ್ಕೆ ಕಟ್ಟುನಿಟ್ಟಿನ ನಿಯಮ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಾರ್ವಜನಿಕ ಗಣೇಶೋತ್ಸವವನ್ನು ಶಾಂತಿ, ಸೌಹಾರ್ದ ಹಾಗೂ ಶಿಸ್ತುಬದ್ಧವಾಗಿ ಆಚರಿಸುವ ನಿಟ್ಟಿನಲ್ಲಿ ಈ ಬಾರಿ ಕಟ್ಟುನಿಟ್ಟಿನ ನಿಯಮಗಳನ್ನು ಪಾಲಿಸುವುದು ಕಡ್ಡಾಯ. ಗಣೇಶ ಪ್ರತಿಷ್ಠಾಪನೆಯಿಂದ ವಿಸರ್ಜನೆಯವರೆಗೆ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಆಯೋಜಕರು ಮುನ್ನೆಚ್ಚರಿಕೆ ವಹಿಸಬೇಕು ಎಂದು ಠಾಣೆ ಪಿಎಸ್ಐ ಐಶ್ವರ್ಯ ನಾಗರಾಳ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಶನಿವಾರ ಸಂಜೆ ನಡೆದ ಗಣೇಶೋತ್ಸವದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.

ಗಣೇಶೋತ್ಸವ ಹಾಗೂ ವಿಸರ್ಜನಾ ಮೆರವಣಿಗೆಯಲ್ಲಿ ಡಿಜೆ ಬಳಕೆಯನ್ನು ಸಂಪೂರ್ಣ ನಿಷೇಧಿಸಲಾಗಿದೆ.

ನಿಯಮ ಉಲ್ಲಂಘಿಸಿ ಡಿಜೆ ಬಳಸಿದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ವೃದ್ಧರು, ಮಕ್ಕಳು, ರೋಗಿಗಳು ಹಾಗೂ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಧ್ವನಿವರ್ಧಕ ಬಳಕೆಯಲ್ಲಿಯೂ ಸರ್ಕಾರದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದರು.

ವಿಸರ್ಜನಾ ಮೆರವಣಿಗೆಯನ್ನು ಅನಗತ್ಯವಾಗಿ ವಿಳಂಬ ಮಾಡದೆ ರಾತ್ರಿ 10 ಗಂಟೆಯೊಳಗೆ ವಿಸರ್ಜನೆ ಪೂರ್ಣಗೊಳಿಸುವುದು ಕಡ್ಡಾಯ. ತಡರಾತ್ರಿವರೆಗೆ ಮೆರವಣಿಗೆ ನಡೆಸುವುದು, ಅತಿಯಾದ ಧ್ವನಿವರ್ಧಕ ಬಳಸುವುದು ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟುಮಾಡುವ ಚಟುವಟಿಕೆಗಳಿಗೆ ಅವಕಾಶವಿಲ್ಲ. ಮೆರವಣಿಗೆಯನ್ನು ನಿಗದಿತ ಮಾರ್ಗದಲ್ಲಿಯೇ ನಡೆಸಬೇಕು. ಸಂಚಾರಕ್ಕೆ ಅಡ್ಡಿಯಾಗದಂತೆ ಸ್ವಯಂಸೇವಕರನ್ನು ನಿಯೋಜಿಸಿ ಪೊಲೀಸ್ ಹಾಗೂ ಸ್ಥಳೀಯ ಆಡಳಿತದೊಂದಿಗೆ ಸಹಕರಿಸಬೇಕು ಎಂದು ಸೂಚಿಸಿದರು.

ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪಿಸುವ ಸಂಘ-ಸಂಸ್ಥೆಗಳು ಹಾಗೂ ಯುವಕ ಮಂಡಳಿಗಳು ಸಂಬಂಧಪಟ್ಟ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯಬೇಕು. ವಿದ್ಯುತ್ ಸಂಪರ್ಕ, ಪಟ್ಟಣ ಪಂಚಾಯಿತಿ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅನುಮತಿಯೂ ಕಡ್ಡಾಯವಾಗಿದೆ. ಪೆಂಡಾಲ್ ಹಾಗೂ ಬ್ಯಾನರ್ ಅಳವಡಿಸುವಾಗ ಸಾರ್ವಜನಿಕ ಸುರಕ್ಷತೆ ಮತ್ತು ಸಂಚಾರಕ್ಕೆ ಅಡ್ಡಿಯಾಗದಂತೆ ಎಚ್ಚರಿಕೆ ವಹಿಸಬೇಕು. ವಿದ್ಯುತ್ ದೀಪಾಲಂಕಾರದಲ್ಲಿ ಕಳಪೆ ತಂತಿ ಹಾಗೂ ಅಸುರಕ್ಷಿತ ಸಂಪರ್ಕ ಬಳಸಬಾರದು ಎಂದರು.

ರಘುನಾಥ ಕೊಂಡಿ ಮಾತನಾಡಿ, ಗಣೇಶೋತ್ಸವವು ಭಕ್ತಿ, ಸಂಸ್ಕೃತಿ ಹಾಗೂ ಸಾಮರಸ್ಯದ ಹಬ್ಬವಾಗಬೇಕು. ಯಾವುದೇ ಧರ್ಮ, ಸಮುದಾಯ ಅಥವಾ ವ್ಯಕ್ತಿಗಳ ಭಾವನೆಗಳಿಗೆ ಧಕ್ಕೆ ತರುವ ಘೋಷಣೆ, ಹಾಡು, ಭಾಷಣ ಹಾಗೂ ಪ್ರಚೋದನಕಾರಿ ವರ್ತನೆಗೆ ಅವಕಾಶ ನೀಡಬಾರದು.

ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಸಂದೇಶ, ವಿಡಿಯೊ ಹಾಗೂ ಸುಳ್ಳು ಸುದ್ದಿಗಳನ್ನು ಹಂಚಿಕೊಳ್ಳದಂತೆ ಯುವಕರು ಎಚ್ಚರ ವಹಿಸಬೇಕು ಎಂದರು.

> ಗಣೇಶ ಪ್ರತಿಷ್ಠಾಪನೆಯಿಂದ ವಿಸರ್ಜನೆಯವರೆಗೆ ಸಾರ್ವಜನಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಆಯೋಜಕರು ಮುನ್ನೆಚ್ಚರಿಕೆ ವಹಿಸಬೇಕು. ನಿಯಮ ಉಲ್ಲಂಘಿಸಿ ಡಿಜೆ ಬಳಸಿದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು.
> -ಐಶ್ವರ್ಯ ನಾಗರಾಳ, ಪಿಎಸ್ಐ, ನರೇಗಲ್ಲ

ಮುಖಂಡ ಮಂಜುನಾಥ ಹೆಗಡೆ ಮಾತನಾಡಿ, ಗಣೇಶೋತ್ಸವ ಅಬ್ಬರದ ಮೆರವಣಿಗೆ ಹಾಗೂ ಕಿವಿಗಡಚಿಕ್ಕುವ ಸಂಗೀತಕ್ಕೆ ಸೀಮಿತವಾಗದೆ ಪರಿಸರ ಸ್ನೇಹಿ ಆಚರಣೆ, ಭಜನೆ, ದೇಶಭಕ್ತಿ ಗೀತೆ, ಮಕ್ಕಳ ಸ್ಪರ್ಧೆಗಳು, ಆರೋಗ್ಯ ಹಾಗೂ ರಕ್ತದಾನ ಶಿಬಿರದಂತಹ ಸಮಾಜಮುಖಿ ಕಾರ್ಯಕ್ರಮಗಳಿಗೆ ವೇದಿಕೆಯಾಗಬೇಕು ಎಂದರು. ಮುಖಂಡ ಸಂತೋಷ್ ಮಣ್ಣೊಡ್ಡರ್, ಪಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೊರಧಾನ್ಯಮಠ ಮಾತನಾಡಿದರು.

ಮಂಜುನಾಥ ಬಿ.ಎಸ್.ಎಸ್. ಮಣ್ಣೊಡ್ಡರ್, ರುದ್ರೇಶ್ ಕೋಟಗಿ, ನಿಂಗರಾಜ ಕೆಂಗಾರ, ಬಸಪ್ಪ, ಎಸ್.ಸಿ. ಸಂಗನಾಳಮಠ, ಬಸವರಾಜ ವಂಕಲಕುಂಟಿ, ವೀರಣ್ಣ ಗುಜಮಾಗಡಿ, ಶ್ರೀಕಾಂತ ಹೊಸಮನಿ, ಮುತ್ತುರಾಜ ಮೇಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಪೊಲೀಸ್ ಸಿಬ್ಬಂದಿ ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# 'ಸಾಕ್ಷಿ' ಕಿರುಚಿತ್ರ ಚಿತ್ರೀಕರಣ ಮುಕ್ತಾಯ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕಲಾಪೋಷಕರ ಮಠ, ಸುಕ್ಷೇತ್ರ ಸಿದ್ಧನಕೊಳ್ಳದ ಪೂಜ್ಯ ಶ್ರೀ ಡಾ. ಶಿವಕುಮಾರ ಸ್ವಾಮೀಜಿಯವರ ಆಶೀರ್ವಾದದೊಂದಿಗೆ ಕೀರ್ತನ ಮೂವಿ ಮೇಕರ್ಸ್ ವತಿಯಿಂದ ನಿರ್ಮಾಣವಾಗುತ್ತಿರುವ 'ಸಾಕ್ಷಿ' ಕಿರುಚಿತ್ರದ ಚಿತ್ರೀಕರಣ ಪೂರ್ಣಗೊಂಡಿದ್ದು, ಸಂಕಲನ ಕಾರ್ಯ ಆರಂಭವಾಗಿದೆ.

ಕೊಲೆ ರಹಸ್ಯವನ್ನು ಭೇದಿಸುವ ರೋಚಕ ಕಥಾಹಂದರ ಹೊಂದಿರುವ ಈ ಕಿರುಚಿತ್ರದ ಚಿತ್ರೀಕರಣ ಬೆಂಗಳೂರಿನ ವಿವಿಧೆಡೆ ಐದು ದಿನಗಳ ಕಾಲ ನಡೆದಿದೆ. ಈ ಹಿಂದೆ 'ಒಬ್ಬಟ್ಟು' ಸಸ್ಪೆನ್ಸ್, ಥ್ರಿಲ್ಲರ್ ಹಾಗೂ ಹಾಸ್ಯ ಕಥಾಹಂದರದ ಚಿತ್ರವನ್ನು ನಿರ್ದೇಶಿಸಿ, ನಿರ್ಮಿಸಿ ಬಿಡುಗಡೆ ಮಾಡಿರುವ ನಿರ್ದೇಶಕ ಲೋಕೇಶ್ ವಿದ್ಯಾಧರ, ಇದೀಗ ತಮ್ಮ ನಿರ್ದೇಶನದ ಎರಡನೇ ಸಿನಿಮಾ 'ಹೂಗಾರ' ಚಲನಚಿತ್ರವನ್ನು ಸೆನ್ಸಾರ್‌ಗೆ ಕಳುಹಿಸಲು ಅಂತಿಮ ಸಿದ್ಧತೆ ನಡೆಸಿದ್ದಾರೆ. ಈಗಾಗಲೇ ಮೂರನೇ ಸಸ್ಪೆನ್ಸ್, ಥ್ರಿಲ್ಲರ್ ಹಿನ್ನೆಲೆಯ ಸಿನಿಮಾದ ಸ್ಕ್ರಿಪ್ಟ್ ಸಿದ್ಧಪಡಿಸಲಾಗುತ್ತಿದ್ದು, ಕಲಾವಿದರ ಆಯ್ಕೆಯೂ ನಡೆದಿದೆ.

ತಂಡದ ಸದಸ್ಯರು ಬಿಡುವಿನ ಅವಧಿಯಲ್ಲೂ ಸಕ್ರಿಯವಾಗಿರಲು ಕಿರುಚಿತ್ರ ನಿರ್ಮಿಸುವ ನಿರ್ಧಾರ ಕೈಗೊಂಡು 'ಸಾಕ್ಷಿ' ಚಿತ್ರವನ್ನು ನಿರ್ಮಿಸಿದ್ದಾರೆ. ಮುಂದಿನ ತಿಂಗಳು ಒಟಿಟಿ ಹಾಗೂ ಯೂಟ್ಯೂಬ್‌ನಲ್ಲಿ ಚಿತ್ರವನ್ನು ಬಿಡುಗಡೆ ಮಾಡಲು ಸಿದ್ಧತೆ ನಡೆಸಲಾಗುತ್ತಿದೆ. ಚಿತ್ರಪ್ರೇಮಿಗಳು ತಂಡವನ್ನು ಪ್ರೋತ್ಸಾಹಿಸಬೇಕು ಎಂದು ನಿರ್ದೇಶಕ ಲೋಕೇಶ್ ವಿದ್ಯಾಧರ ತಿಳಿಸಿದ್ದಾರೆ. ಕಿರುಚಿತ್ರದಲ್ಲಿ ಲೋಕೇಶ್ ವಿದ್ಯಾಧರ, ವಿದ್ಯಾಶ್ರೀ, ಹುನಗುಂದದ ಮಹಾಂತೇಶ್ ಹಳ್ಳೂರ, ಸತೀಶ್ ಶೆಟ್ಟಿ, ಮುತ್ತುರಾಜ್ ಬುದ್ನಿ, ಜೀವನ ಗೌಡ, ಗೀತಾ, ರೋಹಿತ್, ಪಲ್ಲವಿ, ಸುರೇಶ್ ಗ್ಲೋರಿ, ಕಿಟ್ಟಿ ತಾಳಿಕೋಟೆ ಮೊದಲಾದವರು ಅಭಿನಯಿಸಿದ್ದಾರೆ.



ಕ್ಯಾಮೆರಾ-ಬೆಟ್ಟೆಗೌಡ ಕಿಲಾರ, ಮೇಕಪ್-ಗೋವರ್ಧನ್, ಹೇರ್‌ಸ್ಟೈಲ್-ಶಿವು, ಸಂಕಲನ- ಶಿವರಾಜ್, ಡಿಐ-ಜೀವನ್, ನೃತ್ಯ-ರಾಜು ಮಾಸ್ಟರ್. ಡಾ. ಪ್ರಭು ಗಂಜಿಹಾಳ ಹಾಗೂ ಡಾ. ವೀರೇಶ್ ಹಂಡಿಗಿ ಪತ್ರಿಕಾ ಸಂಪರ್ಕದ ಜವಾಬ್ದಾರಿ ನಿರ್ವಹಿಸಿದ್ದಾರೆ.

ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ನಿರ್ದೇಶನದ ಹೊಣೆಯನ್ನು ಲೋಕೇಶ್ ವಿದ್ಯಾಧರ ವಹಿಸಿಕೊಂಡಿದ್ದಾರೆ. ಕೀರ್ತನ ಮೂವಿ ಮೇಕರ್ಸ್ ಹಾಗೂ ಚಿತ್ರತಂಡದ ಬಳಗದ ಸಹಯೋಗದಲ್ಲಿ ಚಿತ್ರ ನಿರ್ಮಾಣವಾಗಿದೆ.

## ಬರಹದಂತೆ ಬದುಕುವ ಸಾಹಿತಿಗಳಿಂದ ಸಮಾಜಕ್ಕೆ ಪರಿಣಾಮಕಾರಿ ಸಂದೇಶ ಸಾಧ್ಯ

# ಸಮಾಜಕ್ಕೆ ಉಪಯುಕ್ತ ಸಾಹಿತ್ಯವೇ ನಿಜ ಸಾರ್ಥಕತೆ

**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಬರಹದಂತೆ ಬದುಕುವ ಸಾಹಿತಿಗಳು ಮಾತ್ರ ಸಮಾಜಕ್ಕೆ ಪರಿಣಾಮಕಾರಿ ಸಂದೇಶ ನೀಡಲು ಸಾಧ್ಯ. ನಡೆ-ನುಡಿಗಳಲ್ಲಿನ ಏಕತೆಯಿಂದ ಸಮಾಜದಲ್ಲಿ ಮನ್ನಣೆ ಗಳಿಸಲು ಸಾಧ್ಯ ಎಂದು ನಿವೃತ್ತ ಪ್ರಾಚಾರ್ಯ ನೀಲಕಂಠ ಮರಡಿ ಹೇಳಿದರು. ಪಟ್ಟಣದ ಜ. ಅನ್ನದಾನೀಶ್ವರ ಕನ್ನಡ ಸಾಹಿತ್ಯ ಭವನದಲ್ಲಿ ಶನಿವಾರ ಮುಂಡರಗಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಹಿರಿಯ ಸಾಹಿತಿ ಐ.ಕೆ. ಕಮ್ಮಾರ ಅವರ 'ಬದುಕು-ಬರಹ' ಕೃತಿ ಅವಲೋಕನ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಹಿರೇವಡ್ಡಟ್ಟಿಯಿಂದ ಗದಗಕ್ಕೆ ಬಂದು ಕಡುಬಡತನದ ನಡುವೆಯೇ ಟ್ಯೂಷನ್, ಪತ್ರಿಕಾರಂಗ ಹಾಗೂ ಬರಹದ ಮೂಲಕ ಸಾಹಿತ್ಯ ಕ್ಷೇತ್ರ ಪ್ರವೇಶಿಸಿದ ಐ.ಕೆ. ಕಮ್ಮಾರ ಅವರು ಹಿಂದೂ-ಮುಸ್ಲಿಂ ಭಾವೈಕ್ಯತೆ ಸಾರುವ ಹಲವು ಕೃತಿಗಳನ್ನು ಸಮಾಜಕ್ಕೆ ನೀಡಿದ್ದಾರೆ. ಅವರ 22 ಕೃತಿಗಳು ಮೌಲ್ಯಯುತವಾಗಿದ್ದು, ಯಾವುದೇ ಹಮ್ಮು-ಬಿಮ್ಮು, ಪ್ರಚಾರ ಬಯಸದೆ ಸಾಹಿತ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಕಾವ್ಯ, ನಾಟಕ, ಸಂವಾದ, ಕಾದಂಬರಿ ಹಾಗೂ ಅಧ್ಯಾತ್ಮಕ ಬರಹ ಸೇರಿ ದಂತೆ ಹಲವು ಪ್ರಕಾರಗಳಲ್ಲಿ ಅವರ ಸಾಹಿತ್ಯ ಸೇವೆ ನಿರಂತರವಾಗಿದೆ. ಇಂತಹ ಸಾಹಿತಿಯ ಬದುಕು-ಬರಹದ ಕುರಿತು ಕಸಾಪ ಕಾರ್ಯಕ್ರಮ ಆಯೋಜಿಸಿರುವುದು ಅವರಿಗೆ ಸಲ್ಲಿಸುವ ದೊಡ್ಡ ಗೌರವ ಎಂದರು. ಕಾರ್ಯಕ್ರಮ ಉದ್ಘಾಟಿಸಿದ ಸಾಮಾಜಿಕ ಕಾರ್ಯಕರ್ತ ಎನ್.ಡಿ. ಕೆಲೂರ ಮಾತನಾಡಿ, ಮುಂಡರಗಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ತಾಲೂಕಿನ ಸಾಹಿತಿಗಳ ಸಮಗ್ರ ಪರಿಚಯ ಹಾಗೂ ಅವರ ಬದುಕು-ಬರಹದ ಕುರಿತು ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ. ತೆರೆಮರೆಯಲ್ಲಿ ಸಾಹಿತ್ಯ ಚಟುವಟಿಕೆಗಳಲ್ಲಿ ತೊಡಗಿರುವ ಸಾಹಿತಿಗಳನ್ನು ಗುರುತಿಸಿ ಗೌರವಿಸುವ ಕಾರ್ಯವಾಗಬೇಕು ಎಂದರು.ಹಿರಿಯ ಸಾಹಿತಿ ಐ.ಕೆ. ಕಮ್ಮಾರ ಮಾತನಾಡಿ, ತಮ್ಮ ತವರು ನೆಲದಲ್ಲಿಯೇ ಕೃತಿ ಪರಿಚಯ ಹಾಗೂ ಅವಲೋಕನ ನಡೆಯುತ್ತಿರುವುದು ಅತೀವ ಸಂತಸ ತಂದಿದೆ. ಜೀವನಾನುಭವವೇ ಸಾಹಿತ್ಯದ ಮೂಲವಾಗಿದ್ದು, ಸಮಾಜದ ನೈಜ ಬದುಕು ಹಾಗೂ ಆಗುಹೋಗುಗಳು ಕಾವ್ಯ-ಕಥೆಗಳಿಗೆ ಪ್ರೇರಣೆಯಾಗುತ್ತವೆ. ತಮ್ಮ ಕೃತಿಗಳ ರಚನೆಗೆ ಮಣಕವಾಡ ಶ್ರೀಗಳು ಹಾಗೂ ಪುಟ್ಟರಾಜ ಗವಾಯಿಗಳಂತಹ ಪುಣ್ಯಪುರುಷರ ಪ್ರೇರಣೆ ಮತ್ತು ಶಕ್ತಿ ಕಾರಣವಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಸಾಪ ಅಧ್ಯಕ್ಷ ಎಂ.ಜಿ. ಗಚ್ಚಣ್ಣವರ ಮಾತನಾಡಿದರು.




> ಸಾಹಿತ್ಯ ಮತ್ತು ಕಾವ್ಯ ಉಳ್ಳವರ ಮನೆಯಲ್ಲಿ ಹುಟ್ಟುವುದಿಲ್ಲ; ನೊಂದ-ಬೆಂದ ಸಮಾಜದ ಆಗುಹೋಗುಗಳು ಹಾಗೂ ನೈಜ ಬದುಕಿನ ಅನುಭವದಿಂದ ಹುಟ್ಟುತ್ತವೆ. ಸಾಹಿತ್ಯ ಸಮಾಜಕ್ಕೆ ಉಪಯುಕ್ತವಾದಾಗ ಸಾಹಿತಿಯ ಕೆಲಸ ಸಾರ್ಥಕವಾಗುತ್ತದೆ.
> - ಐ.ಕೆ. ಕಮ್ಮಾರ, ಹಿರಿಯ ಸಾಹಿತಿ

ನಿಕಟಪೂರ್ವ ಅಧ್ಯಕ್ಷ ಎಸ್.ಬಿ. ಹಿರೇಮಠ, ಉಪಾಧ್ಯಕ್ಷ ಶಂಕರ ಕುಕನೂರ, ಕಾರ್ಯಕಾರಿಣಿ ಸದಸ್ಯರಾದ ರಮೇಶ ಪಾಟೀಲ, ಸಿ.ಕೆ. ಗಣಪ್ಪನವರ, ಗುಡ್ಲಾನೂರ, ಮಧುಮತಿ ಇಳಕಲ್, ಎಸ್.ಬಿ.ಕೆ. ಗೌಡರ, ಆರ್.ಎಲ್. ಪೋಲಿ ಸಪಾಟೀಲ, ನಿಂಗು ಸೊಲಗಿ, ನಾಗೇಶ ಹುಬ್ಬಳ್ಳಿ, ಸಿ.ಎಸ್. ಅರಸನಾಳ, ಮಹೇಶ ಮೇಟಿ, ಲಿಂಗರಾಜ ದಾವಣಗೆರೆ, ಜಯಶ್ರೀ ಅಳವಂಡಿ, ಜ್ಯೋತಿ ಕುರಿಯವರ, ಕೊಟ್ರೇಶ ಜವಳಿ, ಕಳಕಪ್ಪ ಜಲ್ಲಿಗೇರಿ ಮತ್ತಿತರರು ಪಾಲ್ಗೊಂಡಿದ್ದರು.

ನಿಂಗಪ್ಪ ಕುರಿ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಕಸಾಪ ಗೌರವ ಕಾರ್ಯದರ್ಶಿ ವೀಣಾ ಪಾಟೀಲ ಸ್ವಾಗತಿಸಿದರು. ಮಂಜುನಾಥ ಮುಧೋಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಐ.ಎಂ. ಮುಲ್ಲಾ ನಿರೂಪಿಸಿದರು.

## ಸಂಕ್ಷಿಪ್ತ ಸುದ್ದಿಗಳು

### ಬಿ.ಬಿ. ದೇಶಪಾಂಡೆಗೆ ಶಿಷ್ಯ ಬಳಗದಿಂದ ಸನ್ಮಾನ

# ಜನವನದಲ್ಲಿ ಗುರುವಂದನಾ ಕಾರ್ಯಕ್ರಮ



**ವಿಜಯಸಾಕ್ಷಿ ಸುದ್ದಿ, ಗದಗ**
ಸಮೀಪದ ಗ್ರಾಮೀಣ ವಿಶ್ವವಿದ್ಯಾಲಯದ ಜನವನದಲ್ಲಿ ಎಲ್‌ಐಸಿ ವಿಮಾ ಪ್ರತಿನಿಧಿಗಳಿಂದ ಗುರುವಂದನಾ ಕಾರ್ಯಕ್ರಮ ನಡೆಯಿತು. ವಿಶೇಷವೆಂದರೆ, ಎಲ್‌ಐಸಿ ವಿಮಾ ಪ್ರತಿನಿಧಿಗಳು ತಮ್ಮ ಗುರು ಹಾಗೂ ಮಾರ್ಗದರ್ಶಕರಾದ ಬಿ.ಬಿ. ದೇಶಪಾಂಡೆ ಅವರಿಗೆ ಪ್ರಕೃತಿಯ ಮಡಿಲಿನಲ್ಲಿ ಸರಳವಾಗಿ ಗುರುವಂದನಾ ಕಾರ್ಯಕ್ರಮ ಆಯೋಜಿಸಿ ಸನ್ಮಾನಿಸಿದರು. ಬಿ.ಬಿ. ದೇಶಪಾಂಡೆ ಅವರು ಸುಮಾರು ನಾಲ್ಕು ದಶಕಗಳ ಕಾಲ ಎಲ್‌ಐಸಿಯಲ್ಲಿ ಅಭಿವೃದ್ಧಿ ಅಧಿಕಾರಿಯಾಗಿ ಸೇವೆ ಸಲ್ಲಿಸಿ, ಹಲವು ವಿಮಾ ಪ್ರತಿನಿಧಿಗಳಿಗೆ ಮಾರ್ಗದರ್ಶನ ನೀಡಿದ್ದರು. ಅವರ ಮಾರ್ಗದರ್ಶನದಲ್ಲಿ ಬೆಳೆದ ಶಿಷ್ಯ ಬಳಗವೇ ಒಗ್ಗೂಡಿ ಈ ಗುರುವಂದನಾ ಕಾರ್ಯಕ್ರಮವನ್ನು ಆಯೋಜಿಸಿತ್ತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಬಿ.ಬಿ. ದೇಶಪಾಂಡೆ ಹಾಗೂ ಅವರ ಪತ್ನಿ ಭಾರತಿ ದೇಶಪಾಂಡೆ, ಪ್ರತಿಯೊಬ್ಬರೂ ತಮ್ಮ ತಾಯಿ ಹೆಸರಿನಲ್ಲಿ ಸಸಿ ನೆಟ್ಟು ಪರಿಸರ ಸಂರಕ್ಷಣೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು. ಜನವನವು ಉತ್ತಮ ಪರಿಸರ ತಾಣವಾಗಿದ್ದು, ಇಲ್ಲಿ ಸಾರ್ವಜನಿಕರು ಹುಟ್ಟುಹಬ್ಬ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಪ್ರಕೃತಿಯ ನಡುವೆ ಆಚ–'ರಿಸಬಹುದು ಎಂದು ಅಭಿಪ್ರಾಯಪಟ್ಟರು. ತಾವು ಕೂಡ ಶೀಘ್ರದಲ್ಲೇ ಜನವನಕ್ಕೆ ಹಲವು ಹಣ್ಣಿನ ಸಸಿಗಳನ್ನು ನೀಡುವುದಾಗಿ ತಿಳಿಸಿದರು. ಮೌನೇಶ ಭಜಂತ್ರಿ ಮಾತನಾಡಿ, ದೇಶಪಾಂಡೆ ಅವರ ಬಳಿ ಹಲವು ಜನರು ಕಲಿತು ಮಾರ್ಗದರ್ಶನ ಪಡೆದುಕೊಂಡಿದ್ದಾರೆ. ಅವರು ಪ್ರಕೃತಿ ಪ್ರಿಯರಾಗಿರುವುದರಿಂದ ಈ ಗುರುವಂದನಾ ಕಾರ್ಯಕ್ರಮವನ್ನು ಜನವನದಲ್ಲಿ ಆಯೋಜಿಸಲಾಗಿದೆ. ದುಂದು ವೆಚ್ಚ ಮಾಡುವುದು ಬೇಡ ಎಂಬುದು ದೇಶಪಾಂಡೆ ಅವರ ಆಶಯ. ಹೀಗಾಗಿ ಕೇಕ್, ಉಡುಗೊರೆ ಸೇರಿದಂತೆ ದುಂದು ವೆಚ್ಚದ ಆಚರಣೆಗಳನ್ನು ಬದಿಗಿಟ್ಟು, ಪ್ರಕೃತಿಯ ಮಧ್ಯೆ ಸರಳ ರೀತಿಯಲ್ಲಿ ಅವರಿಗೆ ಸನ್ಮಾನ ಮಾಡಲಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಉಮೇಶ ಅಣ್ಣಿಗೇರಿ, ವಿನಯ ಶಲವಡಿ, ಸಿದ್ದು ಬಣಗಾರ, ಮಂಜುನಾಥ ಸೊಪ್ಪಿಮಠ, ಶರೀಫಸಾಬ್ ನದಾಫ್, ನಾಮದೇವ ಲಮಾಣಿ, ವಿರೂಪಾಕ್ಷ ಮಳ್ಳಿ, ಪ್ರದೀಪ ಅಂಗಡಿ, ನಿರ್ಮಲಾ ಕದಡಿ, ಕವಿತಾ ಉಪವಾಸಿ, ರೇಖಾ ಕುರಿ, ರೇಖಾ ಸಾತಣ್ಣವರ, ಲಕ್ಷ್ಮೀ ಸೋಮಣ್ಣವರ, ಶ್ರೀದೇವಿ ಕಮ್ಮಾರ, ಸಿಂಧು ಹಡಪದ, ಶೀಲಾ ಚಳ್ಳಮರದ ಸೇರಿದಂತೆ ಇತರರು ಉಪಸ್ಥಿತ–ರಿದ್ದರು.

## ರಂಭಾಪುರಿ ನಗರಕ್ಕೆ ಮೂಲಸೌಲಭ್ಯ ಕಲ್ಪಿಸಿ

**ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**
ಪಟ್ಟಣದ ರಂಭಾಪುರಿ ನಗರದ ವಿವಿಧ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಿ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿ ನಿವಾಸಿಗಳು ಮಂಗಳವಾರ ಪುರಸಭೆ ಕಚೇರಿಗೆ ತೆರಳಿ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ನಿವಾಸಿಗಳಾದ ಗೋವಿಂದಪ್ಪ ಅರಳಿಕಟ್ಟಿ ಹಾಗೂ ಸುನೀಲ ಸರ್ವದೆ ಮಾತನಾಡಿ, ಹಲವು ವರ್ಷಗಳಿಂದ ಮೂಲಸೌಲಭ್ಯಗಳ ಕೊರತೆಯಿಂದ ನಿವಾಸಿಗಳು ತೊಂದರೆ ಅನುಭವಿಸುತ್ತಿದ್ದಾರೆ. ನಗರದಲ್ಲಿ ಸಮರ್ಪಕ ಬೀದಿ ದೀಪಗಳ ವ್ಯವಸ್ಥೆ ಇಲ್ಲದೆ ರಾತ್ರಿ ವೇಳೆ ವೃದ್ಧರು, ಮಹಿಳೆಯರು ಹಾಗೂ ಮಕ್ಕಳು ಸಂಚರಿಸಲು ಸಮಸ್ಯೆಯಾಗುತ್ತಿದೆ ಎಂದು ತಿಳಿಸಿದರು. ಮುಖ್ಯ ರಸ್ತೆಯ ಇಕ್ಕೆಲಗಳಲ್ಲಿ ಗಿಡಗಂಟೆಗಳು ಬೆಳೆದು ಸಂಚಾರಕ್ಕೂ ತೊಂದರೆಯಾಗುತ್ತಿದೆ. ಕುಡುಕರು ಹಾಗೂ ಕಳ್ಳರ ಹಾವಳಿ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ನಿವಾಸಿಗಳ ಸುರಕ್ಷತೆ ದೃಷ್ಟಿಯಿಂದ ಸಂಬಂಧಪಟ್ಟ ಇಲಾಖೆಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ನಗರದ ಅಗತ್ಯ ಸ್ಥಳಗಳಲ್ಲಿ ಕಸದ ಡಬ್ಬಿಗಳನ್ನು ಅಳವಡಿಸಿ, ಚರಂಡಿಗಳನ್ನು ಸ್ವಚ್ಛಗೊಳಿಸಬೇಕು. ಕಸ ಸಂಗ್ರಹಿಸುವ ವಾಹನ ಪ್ರತಿದಿನ ರಂಭಾಪುರಿ ನಗರಕ್ಕೆ ಆಗಮಿಸುವಂತೆ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಸ್ವಚ್ಛತೆ ಹಾಗೂ ಮೂಲಸೌಲಭ್ಯಗಳಿಗೆ ಆದ್ಯತೆ ನೀಡಬೇಕು ಎಂದು ಮನವಿಯಲ್ಲಿ ಆಗ್ರಹಿಸಿದರು. ಈ ಸಂದರ್ಭದಲ್ಲಿ ರಮೇಶ ದುರಗಣ್ಣವರ, ಅಕ್ಷಯ ಅಚಲಕರ, ಸೋಮಶೇಖರ ಕೊರದಾಳ, ಬಸವೇಣೆಪ್ಪ ದೂಮಖಾತಿ, ಮುತ್ತು ದುರಗಣ್ಣವರ, ಪ್ರಜ್ವಲ ಅಂಗಡಿ, ಫಕ್ಕೀರಪ್ಪ ಸೊರಟೂರ, ಪವನಶಿಂಗ ಕಿಲ್ಲೇದಾರ, ಬಸವರಾಜ ಕುಂದ್ರಳ್ಳಿ, ಸಿದ್ದಪ್ಪ ಶೇರಸೂರಿ, ಸುಷ್ಮಾ ಸರ್ವದೆ, ಮುಕ್ತಾ ಪೂಜಾರ, ಲಕ್ಷ್ಮಿ ಕಡಬಿ, ರತ್ನವ್ವ ಮಾಳದಕರ, ಶಾರದಾ ಭಜಂತ್ರಿ, ಮಹಾದೇವಿ ಸೊರಟೂರ, ಕಮಲಾ ಮೋಡೆರ ಸೇರಿದಂತೆ ಅನೇಕ ನಿವಾಸಿಗಳು ಉಪಸ್ಥಿತರಿದ್ದರು.

## ಗೌರಿ ಗುಡಿ ಓಣಿಯಲ್ಲಿ ಶ್ರಾವಣ ಭಜನಾ ಮುಕ್ತಾಯ



**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**
ಬೆಟಗೇರಿ–ಹುಯಿಲಗೋಳ ರಸ್ತೆಯ ಗೌರಿ ಗುಡಿ ಓಣಿಯಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಶ್ರಾವಣ ಮಾಸದ ಅಂಗವಾಗಿ ಬನ್ನಿಮಹಾಂಕಾಳಿ ಭಜನಾ ಮಂಡಳಿ ವತಿಯಿಂದ ಪ್ರತಿ ಸೋಮವಾರ ಬೆಳಿಗ್ಗೆ 6ರಿಂದ 9ರವರೆಗೆ ಭಜನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಶ್ರಾವಣ ಮಾಸದ ಕೊನೆಯ ಸೋಮವಾರದ ನಿಮಿತ್ತ ಭಜನಾ ಕಾರ್ಯಕ್ರಮವನ್ನು ಭಜನೆ ಮಾಡುವ ಮೂಲಕ ಮುಕ್ತಾಯಗೊಳಿಸಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರಿಗೂ ಬನ್ನಿಮಹಾಂಕಾಳಿ ಭಜನಾ ಮಂಡಳಿ ಅಧ್ಯಕ್ಷ

### ಪ್ರತಿವರ್ಷ ತಾತ್ಕಾಲಿಕ ಹೊಂಡ ನಿರ್ಮಿಸುವುದಕ್ಕೆ ಬ್ರೇಕ್; ಲಕ್ಮೇಶ್ವರದಲ್ಲಿ 2-3 ಕಡೆ ಬೃಹತ್ ಹೊಂಡಕ್ಕೆ ಆಗ್ರಹ

# ಗಣೇಶ ವಿಸರ್ಜನೆಗೆ ಶಾಶ್ವತ ಹೊಂಡ ನಿರ್ಮಿಸಿ

**ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ**
ಗಣೇಶ ಮೂರ್ತಿಗಳ ವಿಸರ್ಜನೆಗಾಗಿ ಪ್ರತಿವರ್ಷ ತಾತ್ಕಾಲಿಕ ಹೊಂಡ ನಿರ್ಮಿಸುವ ಬದಲು ಪಟ್ಟಣದಲ್ಲಿ 2ರಿಂದ 3 ಕಡೆ ಶಾಶ್ವತ, ಬೃಹತ್ ಹಾಗೂ ವೈಜ್ಞಾನಿಕ ವಿಸರ್ಜನಾ ಹೊಂಡಗಳನ್ನು ನಿರ್ಮಿಸಬೇಕು ಎಂದು ಸಾರ್ವಜನಿಕ ಗಜಾನನೋತ್ಸವ ಮಹಾಮಂಡಳಿ ತಾಲೂಕು ಅಧ್ಯಕ್ಷ ಈರಣ್ಣ ಪೂಜಾರ ಹಾಗೂ ಹಿಂದೂ ಮುಖಂಡರಾದ ಮಂಜುನಾಥ ಮಾಗಡಿ, ಗಂಗಾಧರ ಮೆಣಸಿನಕಾಯಿ ಒತ್ತಾಯಿಸಿದರು.

ಮಂಗಳವಾರ ಪಟ್ಟಣದ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಅವರಿಗೆ ಸಾರ್ವಜನಿಕ ಗಜಾನನೋತ್ಸವ ಮಹಾಮಂಡಳಿ ವತಿಯಿಂದ ಮನವಿ ಸಲ್ಲಿಸಿ ಮಾತನಾಡಿದರು.



ಪ್ರತಿವರ್ಷ ಗಣೇಶೋತ್ಸವ ಸಂದರ್ಭದಲ್ಲಿ ಮಣ್ಣಿನ ಹೊಂಡ ನಿರ್ಮಿಸಿ ಮೂರ್ತಿಗಳನ್ನು ವಿಸರ್ಜಿಸಲಾಗುತ್ತದೆ. ಉತ್ಸವ ಮುಗಿದ ಬಳಿಕ ಹೊಂಡ ಮುಚ್ಚಲಾಗುತ್ತಿದ್ದು, ಮುಂದಿನ ವರ್ಷ ಮತ್ತೆ ಹೊಸದಾಗಿ ಹೊಂಡ ನಿರ್ಮಿಸಬೇಕಾದ ಪರಿಸ್ಥಿತಿ ಎದುರಾಗುತ್ತಿದೆ. ಇದರಿಂದ ಭಕ್ತರ ಧಾರ್ಮಿಕ ಭಾವನೆಗಳಿಗೂ ನೋವುಂಟಾಗುತ್ತಿದೆ. ಹೀಗಾಗಿ ಶಾಶ್ವತ ಪರಿಹಾರ ಕಲ್ಪಿಸಲು ಸೂಕ್ತ ಸ್ಥಳಗಳಲ್ಲಿ ದೊಡ್ಡ ಪ್ರಮಾಣದ ವಿಸರ್ಜನಾ ಹೊಂಡ ನಿರ್ಮಿಸಬೇಕು ಎಂದು ಮನವಿ ಮಾಡಿದರು.

ಪಟ್ಟಣದಲ್ಲಿ 18ರಿಂದ 20 ಅಡಿ ಎತ್ತರದ ಬೃಹತ್ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗುತ್ತಿದೆ.

ಮೆರವಣಿಗೆ ಹಾಗೂ ವಿಸರ್ಜನೆ ವೇಳೆ ಹೆಚ್ಚಿನ ಜನಸಂದಣಿ ಉಂಟಾಗುವುದ–ರಿಂದ ಅಗತ್ಯ ಸುರಕ್ಷತಾ ಕ್ರಮ ಹಾಗೂ ಮೂಲಸೌಲಭ್ಯ ಕಲ್ಪಿಸಬೇಕು. ವಿಸರ್ಜನಾ ಹೊಂಡಗಳ ಸುತ್ತಮುತ್ತ ಸ್ವಚ್ಛತೆ, ಕುಡಿಯುವ ನೀರು, ವಿದ್ಯುತ್ ಮತ್ತು ಬೆಳಕಿನ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

**ಮೆರವಣಿಗೆ ಮಾರ್ಗ ಸರಿಪಡಿಸಿ**

ಗಣೇಶ ಮೆರವಣಿಗೆ ಸಾಗುವ ಪ್ರಮುಖ ರಸ್ತೆಗಳಲ್ಲಿ ಬಿದ್ದಿರುವ ಗುಂಡಿಗಳನ್ನು ಮುಚ್ಚಬೇಕು. ಮಾರ್ಗದಲ್ಲಿರುವ ವಿದ್ಯುತ್ ತಂತಿ, ಕೇಬಲ್‌ಗಳು ಹಾಗೂ ಇತರ ಅಡೆತಡೆಗಳನ್ನು ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ತೆರವುಗೊಳಿಸಬೇಕು. ಉತ್ಸವದ ವೇಳೆ ಯಾವುದೇ ತೊಂದರೆಯಾಗದಂತೆ ಪುರಸಭೆ ಹಾಗೂ ಸಂಬಂಧಪಟ್ಟ ಇಲಾಖೆಗಳು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಿಜಯ ಕುಂಬಾರ, ಪ್ರವೀಣ ಬೋಮಲೆ, ನವೀನ ಹಿರೇಮಠ, ಅಮಿತ ಗುಡಗೇರಿ, ಅಭಿಷೇಕ ಉಮಚಗಿ, ಪ್ರಶಾಂತ ಗಾಂಜಿ, ಶರಣು ಗಾಂಜಿ, ಗಂಗಾಧರ ಸವಣೂರ, ಹನುಮಂತಪ್ಪ ಶೆರಸೂರಿ, ಸಂತೋಷ ಅಳಗುಂಡಿ, ಆದೇಶ ಸವಣೂರ, ವಿನಾಯಕ ಸಪ್ಪಡ್ಲ, ಸಾಗರ ಮೆಹರವಾಡೆ, ಅಕ್ಷಯ ಅಚಲಕರ, ಯಶವಂತ ಶಿರಹಟ್ಟಿ, ಗುದ್ನೇಪ್ಪ ಸೊಪ್ಪಿನ ಸೇರಿದಂತೆ ವಿವಿಧ ಗಣೇಶ ಮಂಡಳಿಗಳ ಪದಾಧಿಕಾರಿಗಳು ಹಾಗೂ ಹಿಂದೂ ಸಂಘಟನೆಗಳ ಸದಸ್ಯರು ಇದ್ದರು.

## ಸಮಾಜಮುಖಿ ಸೇವೆಯೇ ಬಿವ್ಹಿಐನ ಧ್ಯೇಯ: ಶ್ರೀಪಾದ ವೈಕುಂಠೆ

**ವಿಜಯಸಾಕ್ಷಿ ಸುದ್ದಿ, ಗದಗ**
ಭಾವಸಾರ್ ವಿಷನ್ ಇಂಡಿಯಾ ಸಮಾಜಮುಖಿಯಾಗಿ ಹಾಗೂ ಜನಮುಖಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸಂಸ್ಥೆಯ ಸೇವಾ ಚಟುವಟಿಕೆಗಳಿಗೆ ಸಮಾಜಬಾಂಧವರ ಸಹಕಾರ ಸ್ಮರಣೀಯವಾಗಿದೆ ಎಂದು ಬಿವ್ಹಿಐ ಅಧ್ಯಕ್ಷ ಶ್ರೀಪಾದ ವೈಕುಂಠೆ ಹೇಳಿದರು.

ನಗರದ ವಿಠ್ಠಲ ಮಂದಿರದಲ್ಲಿ ಭಾವಸಾರ್ ವಿಷನ್ ಇಂಡಿಯಾ ವತಿಯಿಂದ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಹಾಗೂ ಬಿವ್ಹಿಐ ಸಂಸ್ಥಾಪಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂಸ್ಥೆಯ ವಿವಿಧ ಸೇವಾ ಚಟುವಟಿಕೆಗಳು ಹಾಗೂ ಕಾರ್ಯವೈಖರಿ ಕುರಿತು ವಿವರಿಸಿದ ಅವರು, ಸಮಾಜದ ಸಂಘಟನೆ ಮತ್ತು ಸೇವೆಯೇ ಬಿವ್ಹಿಐನ ಮೂಲ ಧ್ಯೇಯವಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಜನಪರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಸಮಾಜದ ಉಪಾಧ್ಯಕ್ಷ ಸುರೇಶ ಮಹೇಂದ್ರಕರ್ ಅಧ್ಯಕ್ಷತೆ ವಹಿಸಿದ್ದರು.




ಬಿವ್ಹಿಐ ಕಾರ್ಯದರ್ಶಿ ಸುಧಾ ವೈಕುಂಠೆ ಹಾಗೂ ಬಿವ್ಹಿಐ ರಾಷ್ಟ್ರೀಯ ಕಾರ್ಯಕಾರಿ ಮಂಡಳಿ ಸದಸ್ಯ ಅಶ್ವಥ್ ಸುಲಾಖೆ ಅವರು ಪ್ರಸಕ್ತ ವರ್ಷ ಸಂಸ್ಥೆಯಿಂದ ಹಮ್ಮಿಕೊಳ್ಳಲಾದ ವಿವಿಧ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಸಮಾಜದ ಶಿಕ್ಷಕರಾದ ವೀರೇಂದ್ರ ಬಿ. ದೊಂಗಡೆ, ಪ್ರೊ. ಶ್ರೀಧರ್ ಕೆ. ವಂಡಕರ್, ಚಂದ್ರಶೇಖರ ಟಿಕಾರೆ, ಗೀತಾ ಎಂ. ದೇವಗಿರಿ, ಸೂರಜ್ ಜಾಧವ್, ರೇಣುಕಾ ಟಿಕಾರೆ, ಅನುರಾಧಾ ಎಂ. ಉತ್ತರಕರ್ ಹಾಗೂ ಕಾಶಿನಾಥ್ ಬೆಂದ್ರೆ ಅವರನ್ನು ಸನ್ಮಾನಿಸಲಾಯಿತು.

ಬಿವ್ಹಿಐ ಸಂಸ್ಥಾಪಕರ ದಿನಾಚರಣೆಯ ಅಂಗವಾಗಿ ಸಂಘಟನೆಯ ಸ್ಥಾಪಕ ನಾರಾಯಣರಾವ್ ತಾತೂಸ್ಕರ್ ಅವರ ಜನ್ಮದಿನ ಆಚರಿಸಲಾಯಿತು. ಸಂಸ್ಥೆಯ ಸೇವಾ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ ಷಣ್ಮುಖ ಸುಲಾಖೆ ಹಾಗೂ ರಾಜಶೇಖರ ಕಪಟಕರ ಅವರನ್ನು ಡಾ. ಮಂಜುನಾಥ ಉತ್ತರಕರ ಸನ್ಮಾನಿಸಿದರು.

ರಾಜಶೇಖರ ಕಪಟಕರ ನಿರೂಪಿಸಿದರು. ಕುಮಾರಿ ಲಾವಣ್ಯ ಮಂಜುನಾಥ ಉತ್ತರಕರ ಪ್ರಾರ್ಥಿಸಿದರು.

ಸುಧಾ ವೈಕುಂಠೆ ವಂದಿಸಿದರು. ಕಾರ್ಯಕ್ರಮದಲ್ಲಿ ಸಮಾಜಬಾಂಧವರು ಹಾಗೂ ಬಿವ್ಹಿಐ ಸದಸ್ಯರು ಪಾಲ್ಗೊಂಡಿದ್ದರು. ಹೆಡ್ಡಿಂಗ್‌ನಲ್ಲಿ ಸೇವಾ ಧ್ಯೇಯ ಮತ್ತು ಶಿಕ್ಷಕರ ಸನ್ಮಾನ ಎರಡಕ್ಕೂ ಒತ್ತು ನೀಡುವಂತೆ ರೂಪಿಸಲಾಗಿದೆ.

### ಮನಸ್ಸು ಉದ್ಯಾನವನವಿದ್ದಂತೆ: ಸುಮಂತ ಕುಮುಚಗಿ

# ಅಮೃತ ಭೋಜನದೊಂದಿಗೆ ಜ್ಞಾನ ಸಿಂಚನ

**ವಿಜಯಸಾಕ್ಷಿ ಸುದ್ದಿ, ಗದಗ**
ನಮ್ಮ ಮನಸ್ಸು ಒಂದು ಉದ್ಯಾನವನವಿದ್ದಂತೆ. ಉತ್ತಮ ಯೋಚನೆಗಳೇ ಅದರಲ್ಲಿನ ಬೀಜಗಳು. ಹೂವು ಬೆಳೆಯಬೇಕೋ, ಕಳೆ ಬೆಳೆಯಬೇಕೋ ಎಂಬುದನ್ನು ನಿರ್ಧರಿಸುವವರು ನಾವೇ. ಆದ್ದರಿಂದ ವಿದ್ಯಾರ್ಥಿ ದೆಸೆಯಲ್ಲಿಯೇ ಉತ್ತಮ ಯೋಚನೆಗಳನ್ನು ಬೆಳೆಸಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕು ಎಂದು ಚಿಂತಕ ಸುಮಂತ ಕುಮುಚಗಿ ಹೇಳಿದರು.

ಗದುಗಿನ ಮಾದರಿ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆ ನಂ. 1 ಹಾಗೂ ಹೆಣ್ಣು ಮಕ್ಕಳ ಶಾಲೆ ನಂ. 1ರಲ್ಲಿ ಗದಗ ಜಿಲ್ಲಾ ಶರಣ ಸಂಕುಲದ ಶರಣೆ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆ ವತಿಯಿಂದ ಆಯೋಜಿಸಿದ್ದ ಶ್ರಾವಣ ಮಾಸದ 'ಅಮೃತ ಭೋಜನ–ಜ್ಞಾನ ಸಿಂಚನ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಶಿಕ್ಷಕರು ನಮ್ಮ ಬದುಕಿನ ದಾರಿದೀಪ. ಬಾಲ್ಯದಲ್ಲಿಯೇ ಬದುಕಿನ ಸುಂದರ ಕಲ್ಪನೆಗಳನ್ನು ಮಕ್ಕಳಲ್ಲಿ ಮೂಡಿಸಿ, ಅವುಗಳಿಗೆ ರೆಕ್ಕೆ ಕಟ್ಟಿ ಪ್ರಗತಿಯತ್ತ ಕೊಂಡೊಯ್ಯುವವರು ಶಿಕ್ಷಕರು. ಇಂದು ನಾವು ಸಾಧನೆ ಮಾಡಿದ್ದರೆ ಅದರ ಹಿಂದೆ ಶಿಕ್ಷಕರ ಅಭಯ ಹಸ್ತವಿದೆ. ಹೀಗಾಗಿ ಮಕ್ಕಳು ಶಿಕ್ಷಕರನ್ನು ಗೌರವಿಸಿ, ಅವರ ಮಾರ್ಗದರ್ಶನದಲ್ಲಿ ಮುನ್ನಡೆಯಬೇಕು ಎಂದರು.




ಮಕ್ಕಳಿಗೆ ಸಿಹಿಭೋಜನ ವಿತರಿಸಿ ಮಾತನಾಡಿದ ಚಿಂತಕಿ ರೇಣುಕಾ ಅಮಾತ್ಯ, ನಮ್ಮ ಹೆಸರುಗಳು ಕೇವಲ ಗುರುತಿನ ಚೀಟಿಗಳಲ್ಲ. ಅವು ನಮ್ಮ ಮನೋಭಾವ, ಸಮಾಜದ ದೃಷ್ಟಿಕೋನ ಹಾಗೂ ಮೌಲ್ಯಗಳನ್ನು ರೂಪಿಸುವ ಶಕ್ತಿ ಹೊಂದಿವೆ. ಹೆಸರನ್ನು ಹಸಿರಾಗಿಸಿಕೊಳ್ಳಲು ಮಕ್ಕಳು ಸಜ್ಜನರ ಸಂಗ ಮಾಡಬೇಕು. ಶಿಕ್ಷಕರು, ತಂದೆ–ತಾಯಿ ಹಾಗೂ ಹಿರಿಯರನ್ನು ಗೌರವಿಸುವ ಗುಣ ಬೆಳೆಸಿಕೊಳ್ಳಬೇಕು ಎಂದರು.

ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಿಸಿ ಮಾತನಾಡಿದ ಚಿಂತಕಿ ಶಿವಲೀಲಾ ಅಕ್ಕಿ, ನಮ್ಮಲ್ಲಿ ಸಮರಸತೆಯ ಭಾವನೆ ನನಸಾಗಬೇಕು. ಇಷ್ಟಪ್ರೇಮ ಹಾಗೂ ಗುರುಭಕ್ತಿ ಸದೃಢವಾಗಬೇಕು. ಆಪ್ತತೆ ಮತ್ತು ವಿನಮ್ರತೆ ಸದಾ ಇರಲಿ. ದುಶ್ಚಟಗಳಿಂದ ದೂರವಿದ್ದು, ಗುರುವಿನ ಆದೇಶಗಳನ್ನು ಪಾಲಿಸುತ್ತ ಏಕಾಗ್ರತೆಯಿಂದ ಶಿಕ್ಷಣ ಪಡೆದು ಉತ್ತಮ ಮಕ್ಕಳಾಗಬೇಕು ಎಂದು ಸಲಹೆ ನೀಡಿದರು.

ವೇದಿಕೆಯ ಸಂಚಾಲಕಿ ಕವಿತಾ ದಂಡಿನ ಪ್ರಾಸ್ತಾವಿಕವಾಗಿ ಮಾತನಾಡಿ, ಸಮುದಾಯವು ಸರ್ಕಾರಿ ಶಾಲೆಗಳಿಗೆ ಆಗಮಿಸಿ ಅಗತ್ಯ ಸೌಲಭ್ಯಗಳ ಬಗ್ಗೆ ಕಾಳಜಿ ವಹಿಸುತ್ತಿರುವುದು ಶ್ಲಾಘನೀಯ. ಮಕ್ಕಳಿಗೆ ಸಿಹಿಭೋಜನದ ಜತೆಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸುವ ಮೂಲಕ ಮಕ್ಕಳು ಹಾಗೂ ಶಿಕ್ಷಕ ಬಳಗಕ್ಕೆ ಸ್ಫೂರ್ತಿ ತುಂಬುತ್ತಿರುವ ದಾನಿಗಳಿಗೆ ಅಭಿನಂದನೆ ಸಲ್ಲಿಸಿದರು. ಎಂ.ಕೆ.ಬಿ.ಎಸ್. ನಂ. 1 ಹಾಗೂ ಕೆ.ಜಿ.ಎಸ್. ನಂ. 1 ಶಾಲೆಗಳ ಮಕ್ಕಳಿಗೆ ಸಿಹಿಭೋಜನ ಹಾಗೂ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ವಿದ್ಯಾರ್ಥಿನಿಯರಾದ ಸಂಜನಾ ಸಾಳುಂಕೆ, ದಿವ್ಯ ದೊಡ್ಡಮನಿ, ಪಲ್ಲವಿ ಪತ್ತಾರ ಹಾಗೂ ವೈಷ್ಣವಿ ಶಿಗ್ಲಿ ವಚನ ಪ್ರಾರ್ಥನೆ ನೆರವೇರಿಸಿದರು.

ಮುಖ್ಯೋಪಾಧ್ಯಾಯಿನಿ ವಿ.ಎಸ್. ಜಕರಡ್ಡಿ ಸ್ವಾಗತಿಸಿದರು. ಎಚ್.ಎಲ್. ಆಸಂಗಿ ಪರಿಚಯಿಸಿದರು. ವಿ.ಎ. ಕುಂಟೋಜಿ ನಿರೂಪಿಸಿದರು.

ಸರ್ವಮಂಗಳಾ ಗುಜಮಾಗಡಿ ನಿರ್ವಹಿಸಿದರು. ಎಫ್.ಎಸ್. ಹಿರೇಮಠ ವಂದಿಸಿದರು. ಶೋಭಾ ವಗ್ಗಿ, ಶ್ರೇಯಾ ಬಾರಾಟಕ್ಕೆ ಸೇರಿದಂತೆ ಶಾಲಾ ಮಕ್ಕಳು ಹಾಗೂ ಪಾಲಕರು ಉಪಸ್ಥಿತರಿದ್ದರು.

## ಅನ್ನದಾನ ಮಹಾಶಿವಯೋಗಿಗಳ 49ನೇ ಪುಣ್ಯಾರಾಧನೆ



**ವಿಜಯಸಾಕ್ಷಿ ಸುದ್ದಿ, ಗದಗ**
ಸ್ವಾತಂತ್ರ್ಯ ಪೂರ್ವದಲ್ಲಿಯೇ ಶಿಕ್ಷಣ ಕ್ರಾಂತಿಗೆ ಮುನ್ನುಡಿ ಬರೆದ ಹಾಲಕೆರೆಯ ಪೂಜ್ಯ ಅನ್ನದಾನ ಮಹಾಶಿವಯೋಗಿಗಳ 49ನೇ ಪುಣ್ಯಾರಾಧನೆ ಅಂಗವಾಗಿ ಭಾನುವಾರ ಗದುಗಿನಲ್ಲಿ ಶ್ರದ್ಧಾಭಕ್ತಿಯ ಬೃಹತ್ ಮೆರವಣಿಗೆ ನಡೆಯಿತು.

ನಗರದ ಮಹಾತ್ಮ ಗಾಂಧಿ ವೃತ್ತದ ಬಳಿಯ ಹಡಗಲಿ ಮಠದ ಆವರಣದಿಂದ ಹಾತಲಗೇರಿ ನಾಕಾ ಬಳಿಯ ಹಾಲಕೆರೆ ಮಠದ ಆನಂದ ಆಶ್ರಮದವರೆಗೆ ಮೆರವಣಿಗೆ ನಡೆಯಿತು.

ಅಲಂಕೃತ ವಾಹನದಲ್ಲಿ ಪ್ರತಿಷ್ಠಾಪಿಸಿದ್ದ ಅನ್ನದಾನ ಮಹಾಶಿವಯೋಗಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಬಳಿಕ ಹಾಲಕೆರೆ ಅನ್ನದಾನೇಶ್ವರ ಸಂಸ್ಥಾನಮಠದ ಜ. ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಮೆರವಣಿಗೆಗೆ ಚಾಲನೆ ನೀಡಿದರು.

ನರೇಗಲ್ ಹಾಗೂ ಗದುಗಿನ ಅನ್ನದಾನೇಶ್ವರ ಶಿಕ್ಷಣ ಸಂಸ್ಥೆಯ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು, ಶಿಕ್ಷಕ–ಶಿಕ್ಷಕಿಯರು ಸೇರಿದಂತೆ ಅಪಾರ ಸಂಖ್ಯೆಯ ಭಕ್ತರು ಶ್ರದ್ಧಾಭಕ್ತಿಯಿಂದ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಡಾ. ಜಿ.ಕೆ. ಕಾಳೆ, ಆರ್.ಬಿ. ಪಾಟೀಲ, ಜಿ.ಎನ್. ಪಾಟೀಲ, ಡಾ. ಬಿ.ಎನ್. ಪಾಟೀಲ, ವ್ಹಿ.ಆರ್. ಪಾಟೀಲ, ಶರಣಬಸಪ್ಪ ಗುಡಿಮನಿ, ಗಿರೀಶಗೌಡ ಪಾಟೀಲ, ಈಶಣ್ಣ ಮುನವಳ್ಳಿ, ಎಸ್.ಪಿ. ಸಂಶಿಮಠ, ಶಿವಲೀಲಾ ಅಕ್ಕಿ, ರೇಣುಕಾ ಅಮಾತ್ಯ, ಚನ್ನಬಸಪ್ಪ ಅಕ್ಕಿ, ಕಮತರ, ಸಾಲಿಮಠ ಸೇರಿದಂತೆ ಹಲವರು ಮೆರವಣಿಗೆಯ ನೇತೃತ್ವ ವಹಿಸಿದ್ದರು.

## ಜಿಲ್ಲಾ ಉತ್ತಮ ಶಿಕ್ಷಕಿ ಭಾರತಿ ಕುಲಕರ್ಣಿಗೆ ಸನ್ಮಾನ




**ವಿಜಯಸಾಕ್ಷಿ ಸುದ್ದಿ, ಗದಗ**
ಶಿಕ್ಷಕರು ಸದಾ ಅಧ್ಯಯನಶೀಲರಾಗಿರಬೇಕು. ಮುಗ್ಧ ಮಕ್ಕಳ ಮನಸ್ಸಿನಲ್ಲಿ ಅಕ್ಷರದ ಬೀಜ ಬಿತ್ತುವ ಕಾರ್ಯದಲ್ಲಿ ನಿರಂತರ ತೊಡಗಿ, ಅವರ ಭವ್ಯ ಭವಿಷ್ಯಕ್ಕೆ ಸಕಲ ರೀತಿಯಲ್ಲಿ ಸಿದ್ಧಗೊಳಿಸುವ ಹೊಣೆಗಾರಿಕೆ ಶಿಕ್ಷಕ ಸಮುದಾಯದ ಮೇಲಿದೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು. ಗದುಗಿನ ಸರ್ಕಾರಿ ಮಾದರಿ ಶಾಲೆಯಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಉತ್ತಮ ಶಿಕ್ಷಕಿ ಪ್ರಶಸ್ತಿ ಪಡೆದ ಶ್ರೀಮತಿ ಭಾರತಿ ಕುಲಕರ್ಣಿ ಅವರನ್ನು ಸನ್ಮಾನಿಸಿ ಅವರು ಮಾತನಾಡಿದರು.

ವ್ಯಕ್ತಿ ಹಾಗೂ ವ್ಯಕ್ತಿತ್ವ ವಿಕಸನದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಕ್ಕಳೊಂದಿಗೆ ಮಕ್ಕಳಾಗಿ ಬೆರೆತು ಅವರಲ್ಲಿ ಅಕ್ಷರದ ಅರಿವು ಮೂಡಿಸಿ, ಅವರನ್ನು ಉನ್ನತ ವ್ಯಕ್ತಿಗಳನ್ನಾಗಿ ರೂಪಿಸಲು ಅಗತ್ಯವಾದ ಅಡಿಪಾಯವನ್ನು ಪ್ರಾಥಮಿಕ ಹಂತದಲ್ಲಿಯೇ ಗಟ್ಟಿಗೊಳಿಸುವ ಪ್ರಾಥಮಿಕ ಶಾಲಾ ಶಿಕ್ಷಕರು ಮಕ್ಕಳ ಭವಿಷ್ಯದ ನಿಜವಾದ ರೂವಾರಿಗಳು ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಜಿಲ್ಲಾ ಉತ್ತಮ ಶಿಕ್ಷಕಿ ಪ್ರಶಸ್ತಿ ವಿಜೇತೆ ಬಿ.ವಿ. ಕುಲಕರ್ಣಿ, ಸರ್ಕಾರಿ ಶಾಲೆಗಳು ಮಕ್ಕಳಲ್ಲಿ 'ನನ್ನತನ'ದ ಜತೆಗೆ ಸಾಮಾಜಿ–ಕ ಅರಿವನ್ನೂ ಮೂಡಿಸುತ್ತವೆ. ಶಿಕ್ಷಕರು ಪರಿಶ್ರಮದಿಂದ ಕಲಿಸುವಿಕೆಯಲ್ಲಿ ತೊಡಗಿಸಿಕೊಂಡಾಗ ಮಕ್ಕಳು ಕಲಿಕೆಯಲ್ಲಿ ಯಶಸ್ಸು ಸಾಧಿಸುತ್ತಾರೆ. ತಮ್ಮ ಪರಿಶ್ರಮವನ್ನು ಸಮುದಾಯ ಗುರುತಿಸಿ ಗೌರವಿಸಿರುವುದು ಸಂತಸ ತಂದಿದೆ ಎಂದು ಹೇಳಿದರು.

ಅಕ್ಕಮಹಾದೇವಿಯ ಕದಳಿಶ್ರೀ ಮಹಿಳಾ ವೇದಿಕೆ ವತಿಯಿಂದ ಭಾರತಿ ಕುಲಕರ್ಣಿ ಅವರನ್ನು ಸನ್ಮಾನಿಸಿ ಗೌರವಿಸಿ, ಶುಭ ಹಾರೈಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯಿನಿಯರಾದ ವಿ.ಎಸ್. ಜಕರಡ್ಡಿ ಹಾಗೂ ಎಚ್.ಎಲ್. ಆಸಂಗಿ, ಶಿಕ್ಷಕಿಯರಾದ ವಿ.ಎ. ಕುಂಟೋಜಿ, ಸರ್ವಮಂಗಳಾ ಗುಜಮಾಗಡಿ, ಮಂಜುಳಾ ಕೊಳ್ಳಿ, ರೇಣುಕಾ ಹೊಸಮನಿ, ಎಫ್.ಎಸ್. ಹಿರೇಮಠ, ಶೋಭಾ ವಗ್ಗಿ, ಶ್ರೇಯಾ ಬಾರಾಟಕ್ಕೆ ಸೇರಿದಂತೆ ಶಾಲಾ ಮಕ್ಕಳು, ಪಾಲಕರು ಉಪಸ್ಥಿತರಿದ್ದರು.

## ಬಸವೇಶ್ವರ ಜಾತ್ರೆಗೆ ಬೆಲ್ಲದ ತುಲಾಭಾರ ಸೇವೆ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**
ಸೋಮವಾರ ಜರುಗಿದ ಇಲ್ಲಿಯ ಹಾಲಗೊಂಡ ಬಸವೇಶ್ವರ ರಥೋತ್ಸವದ ಅನ್ನಸಂತರ್ಪಣೆಗಾಗಿ ಗ್ರಾಮದ ಭಕ್ತರು ಬೆಲ್ಲದ ತುಲಾಭಾರ ಸೇವೆ ನೆರವೇ–ರಿಸಿದರು. ಹಾಲಗೊಂಡ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಪೂಜೆ ಸಲ್ಲಿಸಿದ ಗ್ರಾಮದ ಭಕ್ತ ಸುದರ್ಶನ ಶ್ರೀನಿವಾಸ ಗುಜುಲಾ ಅವರು 110 ಕೆ.ಜಿ. ಬೆಲ್ಲದ ತುಲಾಭಾರ ಸೇವೆ ನೆರವೇರಿಸುವ ಮೂಲಕ ಅನ್ನಸಂತರ್ಪಣೆಗೆ ದೇಣಿಗೆ ನೀಡಿದರು.

ಈ ಸಂದರ್ಭದಲ್ಲಿ ಹಾಲಗೊಂಡ ಬಸವೇಶ್ವರ ಸೇವಾ ಸಮಿತಿಯ ಪದಾಧಿಕಾರಿಗಳು ಹಾಗೂ ಗ್ರಾಮದ ಗಣ್ಯರು ಉಪಸ್ಥಿತರಿದ್ದರು.


**ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ-582101**
ಜಿಲ್ಲಾ: ಗದಗ ರಾಜ್ಯ : ಕರ್ನಾಟಕ
ದೂ:08372-259932 ಇ.ಮೇಲ್: ka.gadag.betageri.cmc@gmail.com
ನಂ.ಗಬೆನಸ/ತಾಂ.ವಿ/ವಹಿ/ಟೆಂಡರ್/2026-27 ದಿನಾಂಕ : 09-09-2026

**ಟೆಂಡರ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999-2000ರ ಪ್ರಕಾರ ಸ್ಟ್ಯಾಂಡರ್ಡ ಟೆಂಡರ್ ಡಾಕ್ಯೂಮೆಂಟ್ಸ್ ನಿಯಮದನ್ವಯ ಸನ್ 2026-27ನೇ ಸಾಲಿನ ನಗರಸಭೆ ಅನುದಾನದಲ್ಲಿ ಕಾಮಗಾರಿ ನಿರ್ವಹಿಸಬೇಕಾಗಿದ್ದು, ಅಂದಾಜು ಪತ್ರಿಕೆ ಮೊತ್ತ ರೂ.12.55 ಲಕ್ಷಗಳಿಗೆ ಒಟ್ಟು 04 ಕಾಮಗಾರಿಗಳಿಗೆ ಟೆಂಡರ್ ದರಗಳನ್ನು ಆಹ್ವಾನಿಸಿದ್ದು, ಖಾಲಿ ಟೆಂಡರ್ ಫಾರಂ ಫೀ 1000.00+18% ಜಿ.ಎಸ್.ಟಿ. ನಗರಸಭೆಗೆ ಪಾವತಿಸಿ ಖಾಲಿ ಟೆಂಡರ್ ಪಾರಂ ಪಡೆಯುವುದು. ಕಾಮಗಾರಿಯ ಹೆಚ್ಚಿನ ಮಾಹಿತಿ ಬೇಕಾದಲ್ಲಿ ತಾಂತ್ರಿಕ ಶಾಖೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆದು. ಟೆಂಡರ್ ಸಲ್ಲಿಸಬಹುದಾಗಿದೆ.
ಖಾಲಿ ಟೆಂಡರ್ ನಮೂನೆಗಾಗಿ ಅರ್ಜಿಯನ್ನು ದಿನಾಂಕ: 9-09-2026 ರಿಂದ ದಿನಾಂಕ: 17-09-2026 ರವರೆಗೆ
ಅರ್ಜಿ ಫಾರ್ಮ ಪಡೆದು ಟೆಂಡರ್ ಭರ್ತಿ ಮಾಡಿ ಹಾಕುವ ದಿನಾಂಕ: 18-09-2026 ಸಂಜೆ 4-00 ಘಂಟೆ ಒಳಗಾಗಿ
ಟೆಂಡರ್ ತೆರೆಯುವ ದಿನಾಂಕ:19-09-2026 ಸಂಜೆ 4-30ಘಂಟೆಗೆ
ಹೆಚ್ಚಿನ ಮಾಹಿತಿ ಬೇಕಾದಲ್ಲಿ ಪಿ.ಡಬ್ಲ್ಯೂ.ಡಿ. ವಿಭಾಗದಲ್ಲಿ ಕೇಳಿ ಪಡೆಯಬಹುದು.

ಸಹಿ/-
ಪೌರಾಯುಕ್ತರು
ಗದಗ ಬೆಟಗೇರಿ ನಗರಸಭೆ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka